MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 68 | ಮಂಗಳವಾರ : 30-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 68 | TUESDAY : 30-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

### ಕೃಷಿ, ಪಶುವೈದ್ಯಕೀಯ ಮತ್ತು ಕೃಷಿಗೆ ಸಂಬಂಧಿತ ವಿಷಯಗಳ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ

# ಹತ್ತಿ ಬೆಳೆ ಕ್ಷೇತ್ರದಲ್ಲಿ ಹೊಸ ಸಂಶೋಧನೆ ನಡೆಯಲಿ: ಡಾ.ಶ್ರೀನಿವಾಸ ರಾವ್ ಸಲಹೆ

ಯುವಮಾರ್ಗ ಸುದ್ದಿ




**ರಾಯಚೂರು,ಡಿ.29–** ರಾಯಚೂರು ಜಿಲ್ಲೆಯಲ್ಲಿ ಹತ್ತಿ ಬೆಳೆಯು ಯಥೇಚ್ಛವಾಗಿದ್ದು, ಈ ಭಾಗದ ಹತ್ತಿ ಬೆಳೆಗಾರರಿಗೆ ಅನುಕೂಲವಾಗುವ ರೀತಿಯಲ್ಲಿ ಹೊಸ ಸಂಶೋಧನೆಗಳು ನಡೆಯಬೇಕಿದೆ ಎಂದು ದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಡಾ. ಶ್ರೀನಿವಾಸ ರಾವ್ ಅವರು ಹೇಳಿದರು.

ಡಿಸೆಂಬರ್ 29ರ ಸೋಮವಾರ ದಂದು ನಗರದ ಕೃಷಿ ವಿವಿಯ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಷ್ಟ್ರೀಯ ಕೃಷಿ ಅಭಿವೃದ್ಧಿ ಸಹಕಾರಿ ನಿಯಮಿತ, ಬಾರಾಮುಲ್ಲಾ, ಜಮ್ಮು ಮತ್ತು ಕಾಶ್ಮೀರ ಇವರ ಸಹಯೋಗದಲ್ಲಿ ಮೂರು ದಿನಗಳ ಅವಧಿಯ ಕೃಷಿ, ಪಶುವೈದ್ಯಕೀಯ ಮತ್ತು ಕೃಷಿಗೆ ಸಂಬಂಧಿತ ವಿಷಯಗಳಲ್ಲಿ ಸುಸ್ಥಿರ ನಾವಿನ್ಯತೆಗಳ ಕುರಿತಾದ ಅಂತರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದೆಲ್ಲೆಡೆ 2002ರಲ್ಲಿ ಉತ್ತಮವಾಗಿ ಬೆಳೆದು ಭರವಸೆ ಮೂಡಿಸಿದ ಬಿಟಿ ಹತ್ತಿ ತಳಿಯು ಕ್ರಮೇಣ ಕೀಟಬಾಧೆಗೆ ತುತ್ತಾಗಿದ್ದು, ನಾವಿನ್ಯತೆಯ ಮೂಲಕ ಹೊಸ ತಳಿಯನ್ನು ಕಂಡುಹಿಡಿಯಬೇಕಾಗಿದೆ. ಹತ್ತಿ ಬಿಡಿಸುವಿಕೆಯ ಸಣ್ಣ ಉಪಕರಣಗಳ ತಯಾರಿಕೆ ಹಾಗೂ ಉತ್ತಮ ರೀತಿಯ ಬ್ಯಾಗೇಜ್‌ನ ಅವಶ್ಯಕತೆಯಿದೆ. ಇವೆರಡನ್ನೂ ವಿಶ್ವವಿದ್ಯಾಲಯವು ಪರಿಗಣಿಸಿ ಕ್ರಮವಹಿಸಬೇಕಾಗಿದೆ ಎಂದರು.

ನಾವಿನ್ಯತೆ ಎಂದರೆ ಹೊಚ್ಚ-ಹೊಸದು, ಹೆಚ್ಚಿನ ಪ್ರಗತಿ ಹಾಗೂ ನಿರಂತರವಲ್ಲದ್ದನ್ನು ಬಿಟ್ಟು ಪ್ರಸ್ತುತಿಗೆ ಹೊಂದಿಕೊಳ್ಳುವ ಬಗ್ಗೆ ವಿಚಾರ ಮಾಡುವುದಾಗಿದೆ. ಕೃಷಿ ಮತ್ತು ಜಾನುವಾರು ಕೃಷಿ ಕ್ಷೇತ್ರಗಳ ಅಭಿವೃದ್ಧಿಗೆ ಕೃಷಿ ವಿಶ್ವವಿದ್ಯಾಲಯ ಮತ್ತು ಕೃಷಿಗೆ ಸಂಬಂಧಿಸಿದ ಸಂಸ್ಥೆಗಳು ಒತ್ತು ಕೊಡಬೇಕು. ಈ ಬಗ್ಗೆ ರಾಯಚೂರಿನ ಕೃ.ವಿ.ವಿಯು ತನ್ನ ಕೊಡುಗೆಯ ಬಗ್ಗೆ ಪರಾಮರ್ಶಿಸಬೇಕೆಂದು ಕಿವಿಮಾತು ಹೇಳಿದರು.

ಮಳೆಮಾರುತ ಮತ್ತು ಮಾರುಕಟ್ಟೆಗಳ ಸಮಸ್ಯೆಗಳತ್ತ ವಿಶ್ವವಿದ್ಯಾಲಯವು ಗಮನಹರಿಸಿ ರೈತರ ಏಳಿಗೆಗೆ ಸಹಕರಿಸಬೇಕು. ತುಂತುರು ನೀರಾವರಿ, ಫಲೀಕರಣ, ನಿವ್ವಳ ಶೂನ್ಯ ಹೊರಸೂಸುವಿಕೆ ಇತ್ಯಾದಿಗಳ ಬಗ್ಗೆ ಗಮನ ನೀಡಬೇಕು. ಕೊಯ್ಲೋತ್ತರ ನಷ್ಟವು ಕೃಷಿಯ ಅಭಿವೃದ್ಧಿಗೆ ಮಾರಕವಾಗಿದ್ದು, ಶೇ.30 ರಷ್ಟು ಆಹಾರವು ಪ್ರತಿ ವರ್ಷ ನಷ್ಟವಾಗುತ್ತಿದ್ದು, ಇದರ ಬೆಲೆ ವಾರ್ಷಿಕವಾಗಿ 1.3 ಲಕ್ಷ ಕೋಟಿಗಳಷ್ಟಾಗಿರುವುದು ಬೇಸರದ ಸಂಗತಿಯಾಗಿದೆ. ಆದ್ದರಿಂದ ರೈತರೇ ಜೀವಾಳ, ರೈತರಿಲ್ಲದಿದ್ದರೆ ಯಾವುದೇ ಕೃಷಿ ವಿಶ್ವವಿದ್ಯಾಲಯ ಇರುವುದಿಲ್ಲ. ಇದನ್ನು ಗಮನದಲ್ಲಿಟ್ಟುಕೊಂಡು ನಾವೆಲ್ಲರೂ ರೈತರ ಅಭಿವೃದ್ಧಿಗೆ ಶ್ರಮಿಸಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ ಅವರು ವಹಿಸಿ ಮಾತನಾಡಿ, ಈ ವಿಶ್ವವಿದ್ಯಾಲಯವು ರೈತರ ಅಭಿವೃದ್ಧಿಗೆ ಪೂರಕವಾಗಿರುವ ಎಲ್ಲಾ ವ್ಯವಸ್ಥೆಗಳನ್ನು ಹೊಂದಿದ್ದು, ಇಲ್ಲಿ ಅಭಿವೃದ್ಧಿಪಡಿಸಿದ ಹಲವಾರು ತಂತ್ರಜ್ಞಾನಗಳು ರೈತರಿಗೆ ತಲುಪುತ್ತಿವೆ. ಆದಾಗ್ಯೂ ಕೂಡ ಇನ್ನೂ ಹೆಚ್ಚಿನ ರೀತಿಯಲ್ಲಿ ಅಂದರೆ, ಆಹಾರ ಉತ್ಪಾದನೆಯ ಮೌಲ್ಯವರ್ಧನೆ, ಬ್ರಾಂಡಿಂಗ್, ಪ್ಯಾಕೆಜಿಂಗ್‌ಗಳಲ್ಲಿ ಪ್ರಗತಿಯನ್ನು ಸಾಧಿಸಬೇಕಾಗಿದೆ. ವಿಶ್ವವಿದ್ಯಾಲಯದ ಜೈವಿಕ ಉತ್ಪಾದನಾ ಘಟಕ, ಬೀಜ ಘಟಕ, ಪೀಡೆನಾಶಕಗಳ **(2ನೇ ಪುಟಕ್ಕೆ>>)**

# ದೇಶದ ವಿದೇಶಿ ವಿನಿಮಯ ಸಂಗ್ರಹ ಏರಿಕೆ




**ನವದೆಹಲಿ,ಡಿ.29–**ಭಾರತದ ವಿದೇಶಿ ವಿನಿಮಯ ಮೀಸಲು ಮತ್ತೆ ಏರಿಕೆಯಾಗಿದೆ . ದೇಶದ ವಿದೇಶಿ ವಿನಿಮಯ ಮೀಸಲು $4.37 ಬಿಲಿಯನ್‌ನಿಂದ $693.32 ಬಿಲಿಯನ್‌ಗೆ ತಲುಪಿದೆ . ಈ ಅಂಕಿ ಅಂಶವು ಅದರ ಸಾರ್ವಕಾಲಿಕ ದಾಖಲೆಯ ಮಟ್ಟಕ್ಕೆ ಬಹಳ ಹತ್ತಿರದಲ್ಲಿದೆ. ಭಾರತೀಯ ರಿಸರ್ವ್ ಬ್ಯಾಂಕ್ ( ಆರ್‌ಬಿಐ) ಸಾಪ್ತಾಹಿಕ ವರದಿ , " ವೀಕ್ಲಿ ಸ್ಟ್ಯಾಟಿಸ್ಟಿಕಲ್ ಸಪ್ಲಿಮೆಂಟ್ " ಪ್ರಕಾರ, ಈ ಹೆಚ್ಚಳಕ್ಕೆ ದೊಡ್ಡ ಕಾರಣವೆಂದರೆ ಚಿನ್ನದ ಮೀಸಲು ಮತ್ತು ವಿದೇಶಿ ಕರೆನ್ಸಿ ಸ್ವತ್ತುಗಳ ಹೆಚ್ಚಳ .ಆರ್‌ಬಿಐ ಪ್ರಕಾರ, ಡಿಸೆಂಬರ್ 19ಕ್ಕೆ ಕೊನೆಗೊಂಡ ವಾರದಲ್ಲಿ ವಿದೇಶಿ ವಿನಿಮಯ ಸಂಗ್ರಹವು $4.37 ಬಿಲಿಯನ್ ಹೆಚ್ಚಾಗಿದೆ.

ಸೆಪ್ಟೆಂಬರ್ 2024 ರಲ್ಲಿ ಭಾರತದ ಅತ್ಯಧಿಕ ವಿದೇಶಿ ವಿನಿಮಯ ಸಂಗ್ರಹವು $704.89 ಬಿಲಿಯನ್ ಆಗಿತ್ತು. ಪ್ರಸ್ತುತ ಅಂಕಿ ಅಂಶವು ಅದಕ್ಕಿಂತ ಸ್ವಲ್ಪ ಕಡಿಮೆಯಾಗಿದೆ. ಕಳೆದ ಕೆಲವು ವಾರಗಳಿಂದ ವಿದೇಶೀ ವಿನಿಮಯ ಸಂಗ್ರಹವು ಸ್ಥಿರವಾಗಿ ಹೆಚ್ಚುತ್ತಿದೆ , ಇದು ದೇಶದ ಆರ್ಥಿಕ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ .

ಆರ್‌ಬಿಐ ದತ್ತಾಂಶದ ಪ್ರಕಾರ , ವಿದೇಶಿ ಕರೆನ್ಸಿ ಆಸ್ತಿಗಳು ( ಎಫ್‌ಸಿಎ) $559.428 ಬಿಲಿಯನ್‌ಗೆ ಏರಿದ್ದು, ವಾರಕ್ಕೆ ಸುಮಾರು 1.64 ಬಿಲಿಯನ್ ಹೆಚ್ಚಳವಾಗಿದೆ . ಡಾಲರ್, ಯೂರೋ , ಯೆನ್ ಮತ್ತು ಪೌಂಡ್‌ನಂತಹ ವಿದೇಶಿ ಕರೆನ್ಸಿಗಳನ್ನು ಒಳಗೊಂಡಿರುವ ವಿದೇಶಿ ವಿನಿಮಯ ಮೀಸಲುಗಳ ಅತಿದೊಡ್ಡ ಅಂಶವೆಂದರೆ ಎಫ್‌ಸಿಎ .ಭಾರತದ ಚಿನ್ನದ ಸಂಗ್ರಹವು ಗಮನಾರ್ಹ ಏರಿಕೆ ಕಂಡಿದ್ದು, ಒಂದು ವಾರದಲ್ಲಿ $2.62 ಶತಕೋಟಿ ಏರಿಕೆಯಾಗಿ $110.365 ಶತಕೋಟಿಗೆ ತಲುಪಿದೆ. ಇತ್ತೀಚಿನ ಹಣಕಾಸು ನೀತಿ ಪರಿಶೀಲನೆಯ ನಂತರ , ವಿದೇಶಿ ವಿನಿಮಯ ಮೀಸಲು 11 ತಿಂಗಳಿಗಿಂತ ಹೆಚ್ಚಿನ ಆಮದು ವೆಚ್ಚವನ್ನು ಪೂರೈಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ಆರ್‌ಬಿಐ ಹೇಳಿದೆ. ಇದರರ್ಥ ಭಾರತವು ದೀರ್ಘಕಾಲದವರೆಗೆ ಸರಕುಗಳನ್ನು ಆಮದು ಮಾಡಿಕೊಳ್ಳಬೇಕಾದರೂ ಸಹ, ಅದು ವಿದೇಶಿ ವಿನಿಮಯದ ಕೊರತೆಯನ್ನು ಎದುರಿಸುವುದಿಲ್ಲ.

2022 ರಿಂದ 2025 ರವರೆಗೆ ವಿದೇಶಿ ವಿನಿಮಯ

ಮೀಸಲು ಎಷ್ಟು ಹೆಚ್ಚಾಗಿದೆ? 2022 ರಲ್ಲಿ ವಿದೇಶಿ ವಿನಿಮಯ ಮೀಸಲು ಸುಮಾರು $71 ಬಿಲಿಯನ್ ಕಡಿಮೆಯಾಗಿದೆ. 2023 ರಲ್ಲಿ, ಮೀಸಲು $58 ಬಿಲಿಯನ್ ಹೆಚ್ಚಾಗಿದೆ . 2024 ರಲ್ಲಿ, ಇದು ಸುಮಾರು $20 ಬಿಲಿಯನ್‌ಗೆ ಏರಿತು. ಏತನ್ಮಧ್ಯೆ, 2025 ರಲ್ಲಿ, ಈಗಾಗಲೇ $50 ಬಿಲಿಯನ್‌ಗಿಂತ ಹೆಚ್ಚಿನ ಹೆಚ್ಚಳ ದಾಖಲಾಗಿದೆ.

# ಸರ್ವರ ಸರ್ವೋದಯ ಕುವೆಂಪು ಸಾಹಿತ್ಯದ ಸಾರ : ಪ್ರೊ. ಸರಿತಾ ಇಂಚೂರ



ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.29–** ಕುವೆಂಪು ವಿಶ್ವಮಾನವ ಸಂದೇಶದಲ್ಲಿ ಮನುಜಮತ ವಿಶ್ವಪಥ ಸರ್ವೋದಯ ಸಮನ್ವಯ ಪೂರ್ಣದೃಷ್ಟಿ ಪಂಚ ಮಂತ್ರಗಳನ್ನು ಹೇಳುತ್ತಾರೆ. ಆದರೆ ಸರ್ವರ ಸರ್ವೋದಯವೇ ಕುವೆಂಪು ಸಾಹಿತ್ಯದ ಒಟ್ಟು ಸಾರವಾಗಿದೆ ಎಂದು ಲಿಂಗಸುಗೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಸರಿತಾ ಇಂಚೂರ ಹೇಳಿದರು.

ಪಟ್ಟಣದ ಶ್ರೀ ಉಮಾಮಹೇಶ್ವರಿ ಪದವಿ ಪೂರ್ವ ಕಾಲೇಜು ಹಾಗೂ ತಾಲ್ಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ನಡೆದ ಕುವೆಂಪು ವಿಚಾರಧಾರೆಗಳ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು ಕುವೆಂಪು ಸಾಹಿತ್ಯ ವೈಚಾರಿಕ ಪ್ರಜ್ಞೆಯನ್ನು, ಮಾನವೀಯ ಮೌಲ್ಯಗಳನ್ನು ಒಟ್ಟೊಟ್ಟಿಗೆ ಬೆಳೆಸುತ್ತದೆ. ಮೌಢ್ಯವನ್ನು ತಿರಸ್ಕರಿಸುವ ಕುವೆಂಪು ವೈಚಾರಿಕ ಚಿಂತನೆಗಳು ಮಾನವ ಧರ್ಮವನ್ನು ಎತ್ತಿಹಿಡಿಯುತ್ತವೆ. ಹುಟ್ಟುವ ಹಸುಗೂಸು ವಿಶ್ವಮಾನವನಾಗಿ ಹುಟ್ಟಿ ಅದು ಜಾತಿ, ಮತ, ಪಂತಗಳಲ್ಲಿ ಬಂಧಿಯಾಗುತ್ತದೆ. ಈ ಬಂಧನವನ್ನು ಕಳಚಿ ವಿಶ್ವಮಾನವನನ್ನಾಗಿಸುವ ಪ್ರಜ್ಞೆಯೇ ಇಂದಿನ ಶಿಕ್ಷಣದ ಆದ್ಯತೆಯಾಗಬೇಕು ಎನ್ನುವುದು ಕುವೆಂಪು ಅವರ ಒತ್ತಾಸೆಯಾಗಿತ್ತು. ಕುವೆಂಪು ಸಾಹಿತ್ಯದ ಓದಿನಿಂದ ನಮ್ಮಲ್ಲಿರುವ ದಾಸ್ಯಭಾವನೆಯಿಂದ ಬಿಡುಗೊಂಡು ಧರ್ಮಾತೀತವಾಗಿ ಬದುಕುವ ರೀತಿಯನ್ನು ಕಲತುಕೊಳ್ಳಬೇಕೆಂದು ಹೇಳಿದರು.

ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿದ ಕಥೆಗಾರ ಶರಣಬಸವ ಗುಡದಿನ್ನಿ ಮಾತಾನಾಡಿ ಕುವೆಂಪು ಬಾಲ್ಯ ಅನೇಕ ಸವಾಲುಗಳಿಂದ ಕಳೆದರು. ಪ್ರಕೃತಿಯ ಆರಾಧನೆಯು ಅವರ ಸಾಹಿತ್ಯದ ಆಯಾಮವಾಗಿದ್ದು, ಪ್ರಕೃತಿಯ ಅನುಭೂತಿಯಲ್ಲಿ ಆಧ್ಯಾತ್ಮದ ತುದಿ ತಲುಪಿದರು. ವಿವೇಕಾನಂದ ರಾಮಕೃಷ್ಣರು ಕುವೆಂಪು ಅವರನ್ನು ಪ್ರಭಾವಿಸಿದರು ಎಂದರು. **(2ನೇ ಪುಟಕ್ಕೆ>>)**

# ಮಾನವಿ ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳ ಒಕ್ಕೂಟ ವತಿಯಿಂದ ಕುವೆಂಪು ಜನ್ಮದಿನಾಚರಣೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ



ಯುವಮಾರ್ಗ ಸುದ್ದಿ

ಮಾನ್ವಿ,ಡಿ.29–ತಾಲೂಕಿನ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರದಂದು ಹಮ್ಮಿಕೊಂಡಿದ್ದ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಪದಗ್ರಹಣ ಕಾರ್ಯಕ್ರಮವು ಕುವೆಂಪು ಅವರ ಜನ್ಮದಿನಾಚರಣೆ ಪ್ರಯುಕ್ತ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದರ ಮುಖಾಂತರ ಆರಂಭವಾಯಿತು.

ಈ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾದಂತಹ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರು ರಾಜ ಸುಭಾಷ್‌ಚಂದ್ರ ನಾಯಕ್ ಪ್ರಧಾನ ಕಾರ್ಯದರ್ಶಿ ರಾಜು ತಾಳಿಕೋಟೆ, ಸಹಕಾರ್ಯದರ್ಶಿ ಅಖಿಲೇಶ್ ಕುರುಡಿ, ಖಜಾಂಚಿ ಶರಣಬಸವ, ಉಪಾಧ್ಯಕ್ಷ ಭೀಮರಾಯ ಸೀತಾಮನಿ, ಶಶಿಕಲಾ ಪಾಟೀಲ್ ಎಂ.ಎ.ಎಚ್ ಮುಖೀಮ್, ಸಂಘಟನಾ ಕಾರ್ಯದರ್ಶಿ ಸಂದೀಪ್, ನಿಕಟಪೂರ್ವ ಅಧ್ಯಕ್ಷ ಎಚ್ ಶರ್ಪುದ್ದೀನ್ ಕಾನೂನು ಸಲಹೆಗಾರರಾದ ಲಕ್ಷ್ಮೀದೇವಿ, ಹಾಗೂ ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮನೋಜ್ ಕುಮಾರ್ ಮಿಶ್ರಾ ಕಾರ್ಯದರ್ಶಿಗಳು ಅನಿಲ್ ಕುಮಾರ ಎಚ್ ಉಪಸ್ಥಿತರಿದ್ದರು.

# ಜಾತಿಗಳ ಜಾಡ್ಯಕ್ಕೆ ಕುವೆಂಪು ಸಾಹಿತ್ಯವೇ ಔಷಧಿ:ನರಸಿಂಹ ಹೆಚ್

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.29–**ಧರ್ಮವು ಒಂದು ನಡಾವಳಿಯೆ ಹೊರತು ಅದು ನಂಬಿಕೆಯಲ್ಲ. ಪರಸ್ಪರ ಧರ್ಮಗಳನ್ನು ದ್ವೇಷಿಸದೆ ಪ್ರೀತಿ, ಸಹೋದರತೆಯಿಂದ ಸರ್ವಧರ್ಮಗಳನ್ನು ಗೌರವಿಸುವ ವ್ಯಕ್ತಿಯೆ ವಿಶ್ವಮಾನವನಾಗಲು ಸಾಧ್ಯ ಎಂದು ಕರ್ನಾಟಕ ರಕ್ಷಣಾ ವೇದಿಕೆ ಹೆಚ್ ಶಿವರಾಮೇಗೌಡ ಬಣದ ತಾಲೂಕ ಅಧ್ಯಕ್ಷ ನರಸಿಂಹ ಹೆಚ್ ಹೇಳಿದರು.

ಪಟ್ಟಣದ ಕೋನಾಪುರ ಪೇಟೆ ಪ್ರೌಢಶಾಲೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಪರ ಸಂಘಟನೆಗಳ ಒಕ್ಕೂಟ ವತಿಯಿಂದ ಹಮ್ಮಿಕೊಂಡಿದ್ದ ಮಹಾಕವಿ ಕುವೆಂಪು ಜನ್ಮೋತ್ಸವ ಕಾರ್ಯ ಕ್ರಮದಲ್ಲಿ ಮಾತನಾಡಿದರು.


ಇದೇ ವೇಳೆ ನಿವೃತ್ತ ವೀರನಗೌಡ ಪೊಲೀಸ್ ರವರು ಮಾತನಾಡಿ

ಅನಾದಿ ಕಾಲದಿಂದಲೂ ಭಾರತೀಯ ಸಮಾಜದಲ್ಲಿ ಬೇರೂರಿರುವ ವರ್ಣಾಶ್ರಮ ವ್ಯವಸ್ಥೆ ದೇಶದ ಪ್ರಗತಿಗೆ ಮಾರಕವಾಗಿದೆ. ಎಲ್ಲಿಯವರೆಗೂ ಈ ಜಾತಿ ವ್ಯವಸ್ಥೆ ಜೀವಂತ ಇರೋವರೆಗೂ ಅಸಮಾನತೆ, ಹಿಂಸೆ, ಅತ್ಯಾಚಾರವನ್ನು ಕಾಣಬಹುದಾಗಿದೆ. ಇಂತಹ ಜಾತಿ ವ್ಯವಸ್ಥೆ, ಮೂಢನಂಬಿಕೆ ಮತ್ತು ಕಂದಾಚಾರಗಳ ಬಗ್ಗೆ ತಮ್ಮ ಲೇಖನಿ ಮೂಲಕ ವಿರೋಧಿಸಿದ ರಾಷ್ಟಕವಿ ಕುವೆಂಪು ಅವರು ಶೂದ್ರ ವರ್ಗದ ಕವಿಯಾಗಿ ಹೊರಹೊಮ್ಮಿದ್ದರು. ಜಾತಿ, ಮೌಢ್ಯತೆ ಮತ್ತು ಅಂದಕಾರದ ಅಂಕುಶದಿಂದ ಹೊರಬಂದು ನಿರಂಕುಶಮತಿಗಳಾಗಿ ಎಂದು ಸಂದೇಶ ನೀಡಿದ ಮಹಾನ ಕವಿ ಕವೆಂಪು ಅವರು ಎಂದರು.ಇದೆ ವೇಳೆ ಸರ್ಕಾರಿ ಪ್ರೌಡಶಾಲೆ ವತಿಯಿಂದ ವೇದಿಕೆಯ ಮೇಲಿನ ಎಲ್ಲಾ ಗಣ್ಯರಿಗೆ ಸನ್ಮಾನಿಸಿ ಗೌರವಿ ಸಲಾಯಿತು.

ಈ ಸಂಧರ್ಬದಲ್ಲಿ ಯಲ್ಲಪ್ಪ ನಿಲಗಲ್ ತಾಲೂಕು ಗೌರವ ಅಧ್ಯಕ್ಷರು, ದೀಪಕ್ ಯಾದವ್ ತಾಲೂಕು ಪ್ರಧಾನ ಕಾರ್ಯದರ್ಶಿಗಳು, ಪತ್ರಕರ್ತ ಸಂಘದ ಅಧ್ಯಕ್ಷ ಅಶೋಕ್ ತಡ್ಕಲ್, ಕನ್ನಡ ಸಾಹಿತ್ಯ ಪರಿಷತ್ತು ತಾಲೂಕ ಅಧ್ಯಕ್ಷ ಶರಣಬಸವನೀರಮಾನ್ವಿ, ಉಪಾಧ್ಯಕ್ಷ ಗೂಳಪ್ಪ ಬೊಮ್ಮನಾಳ, ನಾಗರಾಜ್ ಶೆಟ್ಟಿ ಬಿಜೆಪಿ ಮುಖಂಡರು, ರವಿಕುಮಾರ್ ಮದ್ಲಾಪುರ್ ತಾಲೂಕು ಉಪಾಧ್ಯಕ್ಷರು,ಶಾಂತಕುಮಾರ್ ನಗರ ಘಟಕ ಗೌರವ ಅಧ್ಯಕ್ಷರು, ಮಹೇಂದ್ರ ನಾಯಕ್ ನಗರ ಘಟಕ ಅಧ್ಯಕ್ಷರು , ಸಿದ್ದಪ್ಪ ಮದ್ರಾಪುರ್, ಸನತ್ ಕುಮಾರ್ ಕುಮಾರ್, ನವೀನ್ ಕುಮಾರ್,ಶ್ರೀನಿವಾಸ್, ರಬ್ಬಣಕಲ್ , ತಾಯಪ್ಪ, ದೇವರಾಜ್, ವಿನಯ್ ಕುಮಾರ್ ಬಿ ಎಂ, ಅಂಜಿ ಯಾದವ್ ಸೇರಿದಂತೆ ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜವಳಗೆರೆ ಗ್ರಾಮದಲ್ಲಿ ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ಅವರಿಗೆ ಗೌರವ ಸನ್ಮಾನ

ಯುವಮಾರ್ಗ ಸುದ್ದಿ



**ಜವಳಗೆರೆ : ಡಿ 29:** ಗ್ರಾಮದಲ್ಲಿ ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ಅವರಿಗೆ ಗೌರವ ಸನ್ಮಾನ ಕಾರ್ಯಕ್ರಮದ ನಿಮಿತ್ತ ರಾಯಚೂರಿಗೆ ಆಗಮಿಸಿ, ಸಿಂಧನೂರು ನಗರದ ಕಡೆಗೆ ಪ್ರಯಾಣ ಬೆಳೆಸುತ್ತಿದ್ದ ಕರ್ನಾಟಕ ಸರಕಾರದ ಅಬಕಾರಿ ಸಚಿವರಾದ ಆರ್. ಬಿ. ತಿಮ್ಮಾಪುರ ಅವರಿಗೆ ದಾರಿ ಮಧ್ಯದಲ್ಲಿ ಜವಳಗೆರೆ ಗ್ರಾಮ ಅಂಬೇಡ್ಕರ್ ಮೈದಾನದ ಹತ್ತಿರ ಭವ್ಯ ಸ್ವಾಗತ ಹಾಗೂ ಗೌರವ ಸನ್ಮಾನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಶ್ರೀ ಆರೋಗ್ಯಪ್ಪ, ದಲಿತ ಸಂಘಟನೆಯ ಮುಖಂಡರಾದ ಜಾನಪ್ಪ, ದೊಡ್ಡಮನಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಅಯ್ಯಪ್ಪ ದೊಡ್ಡಮನಿ, ರಮೇಶ್ ಮಾಸ್ಟರ್ , ರಮೇಶ್ ತಂದೆ ಯಮುನಪ್ಪ, ಪ್ರಸಾದ್, ಪುನೀತ್ ಸೇರಿದಂತೆ ಇತರರು ಸಚಿವರಿಗೆ ಶಾಲು ಹಾರ ಹಾಕಿ ಗೌರವ ಸಮರ್ಪಿಸಿದರು.

ಅದೇ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ದಲಿತ ನಾಯಕರಾದ ಬಾಲಸ್ವಾಮಿ ಕೊಡ್ಲಿ ಅವರಿಗೂ ಗೌರವ ಸನ್ಮಾನ ಸಲ್ಲಿಸಿ, ಅವರ ಸಾಮಾಜಿಕ ಸೇವೆ ಹಾಗೂ ಸಂಘಟನಾ ಕಾರ್ಯವನ್ನು ಪ್ರಶಂಸಿಸಲಾಯಿತು.

## ಮೊದಲನೇಯ ಪುಟದಿಂದ

# ಹತ್ತಿ ಬೆಳೆ ಕ್ಷೇತ್ರದಲ್ಲಿ ಹೊಸ ಸಂಶೋಧನೆ ನಡೆಯಲಿ: ಡಾ.ಶ್ರೀನಿವಾಸ ರಾವ್ ಸಲಹೆ

ಅವಶೇಷಗಳ ವಿಶ್ಲೇಷಣಾ ಘಟಕಗಳು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮೆಣಸಿನಕಾಯಿ ಬಾಧಿಸುವ ಬ್ಲಾಯಕ್ ತ್ರಿಪ್ಸ್ ನಿರ್ವಹಣೆಯಲ್ಲಿ ನಮ್ಮ ವಿಶ್ವವಿದ್ಯಾಲಯದ ಜೈವಿಕ ಉತ್ಪಾದನಾ ಘಟಕದ ಕೊಡುಗೆ ಅಪಾರವಾಗಿದೆ. ಅಂತೆಯೇ ಬೀಜ ಉತ್ಪಾದನಾ ಘಟಕವು ಪ್ರಸ್ತುತ 22,000 ಕ್ವಿಂಟಲ್ ಬೀಜ ಉತ್ಪಾದಿಸಿ ರೈತರಿಗೆ ಮಾರಾಟ ಮಾಡಲಾಗಿದೆ. ಬರುವ ದಿನಗಳಲ್ಲಿ ಸಿರಿಧಾನ್ಯಗಳ ಮೌಲ್ಯವರ್ಧಿತ ಪಾರ್ಕ್ ಕೂಡ ಈ ವಿಶ್ವವಿದ್ಯಾಲಯದಲ್ಲಿ ಸ್ಥಾಪನೆಯಾಗಲಿದ್ದು, ಸಣ್ಣ ಮತ್ತು ಅತಿಸಣ್ಣ ಸಿರಿಧಾನ್ಯ ಬೆಳೆಗಾರರಿಗೆ ವರದಾನವಾಗಲಿದೆ ಎಂದರು.

ವಿಶ್ವವಿದ್ಯಾಲಯವು ಕೃಷಿ ಯಂತ್ರೋಪಕರಣಗಳ ಅಭಿವೃದ್ಧಿ ಹಾಗೂ ಬಳಕೆಗೆ ಮಹತ್ವ ನೀಡಿದ್ದು, ಭತ್ತದಲ್ಲಿ ಭೂಮಿ ತಯಾರಿಕೆಯಿಂದ ಹಿಡಿದು ಕೊಯ್ಲೋತ್ತರದವರೆಗೆ ಬೇಕಾಗುವ ಸಣ್ಣ-ಸಣ್ಣ ಉಪಕರಣಗಳನ್ನು ಅಭಿವೃದ್ಧಿಪಡಿಸಿ ರೈತರ ಬಳಕೆಗೆ ನೀಡಿದೆ. ಕೃಷಿ ತಾಂತ್ರಿಕ ತಂತ್ರಜ್ಞಾನ ಮತ್ತು ಬೆಳೆ ಸಂರಕ್ಷಣೆ ವಿಷಯಗಳಲ್ಲಿ 14 ಪೇಟೆಂಟ್‌ಗಳು ದೊರೆತಿವೆ. ಹಾಗೂ ಕೃಷಿ ತಾಂತ್ರಿಕ ವಿಭಾಗದ 12 ವಿದ್ಯಾರ್ಥಿಗಳು ಗೇಟ್ ಪರೀಕ್ಷೆಯನ್ನು ತೇರ್ಗಡೆ ಮಾಡಿರುವರು ಎಂದು ನೆರೆದಿದ್ದ ಸಮ್ಮೇಳನಾರ್ಥಿಗಳಿಗೆ ತಿಳಿಸಿದರು.

ಜಾನುವಾರುಗಳ ಆಹಾರ ಕೊರತೆಯನ್ನು ನೀಗಿಸಲು ಹೈಡ್ರೋಫೋನಿಕ್ ತಂತ್ರಜ್ಞಾನ ಮತ್ತು ಅಝೋಲ್ಲಾಗಳ ಉತ್ಪಾದನೆಗೆ ವಿಶ್ವವಿದ್ಯಾಲಯವು ಒತ್ತು ನೀಡಿದೆ. ಆದ್ದರಿಂದ, ಕೃಷಿಯೇ ನಮಗೆ ಮೂಲ ಸಂಸ್ಕೃತಿ, ಕೃಷಿ ಇಲ್ಲದಿದ್ದರೆ ಯಾವ ಸಂಸ್ಕೃತಿಯು ಇರಲು ಸಾಧ್ಯವಿಲ್ಲ. ರೈತರೇ ಜೀವಾಳ, ಅವರ ಏಳ್ಗೆಯೆತ್ತ ನಾವೆಲ್ಲರೂ ಸಾಗೋಣ ಎಂದರು.

ಈ ವೇಳೆ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಯ ಸದಸ್ಯರಾದ ಮಲ್ಲಿಕಾರ್ಜುನ ಡಿ ಅವರು ಮಾತನಾಡಿ, ವಿಶ್ವವಿದ್ಯಾಲಯವು ಹಲವಾರು ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಿದರೂ ಕೂಡ ಅವುಗಳ ಬಳಕೆ ರೈತರ ಮಟ್ಟದಲ್ಲಿ ಬಹಳ ಕಡಿಮೆಯಿದೆ. ಇದರ ಬಗ್ಗೆ ವಿಶ್ವವಿದ್ಯಾಲಯವು ಗಮನಹರಿಸಬೇಕು ಹಾಗೂ ವಿಶ್ವವಿದ್ಯಾಲಯದಲ್ಲಿ ರೈತರಿಗೆ ಬೇಕಾಗಿರುವ ಸಮಗ್ರ ಕೃಷಿ ಮತ್ತು ಸಂಪನ್ನ ಕೃಷಿ ಪ್ರಾತ್ಯಕ್ಷಿಕೆ ತಾಕುಗಳ ಪುನಶ್ಚೇತನವಾಗಬೇಕಾಗಿದೆ ಎಂದರು.

ಈ ವೇಳೆ ಹೈದರಾಬಾದಿನ ಪಿ.ವಿ.ನರಸಿಂಹರಾವ್ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಪ್ರೊ. ಎಂ. ಕಿಶನ್‌ಕುಮಾರ, ಓಡಿಸ್ಸಾದ ಕೇಂದ್ರಿಯ ಭತ್ತ ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಡಾ. ಜಿ. ಎ. ಕೆ. ಕುಮಾರ, ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗದ ಡೀನ್‌ರಾದ ಡಾ. ದಿಲೀಪ್ ಕುಮಾರ, ಬಾರಾಮುಲ್ಲಾದ ಡಾ. ಆರ್. ಎ. ಶಾಹ ಅವರು ಮಾತನಾಡಿದರು.

ಇದಕ್ಕೂ ಮುಂಚೆ ಅಂತರಾಷ್ಟ್ರೀಯ ಸಮ್ಮೇಳನದ ಆಯೋಜನೆಯ ಉದ್ದೇಶವನ್ನು ಸಮ್ಮೇಳನದ ಆಯೋಜನಾ ಸಂಘಟಕರಾದ ಡಾ.ಜಾಗೃತಿ ಬಿ. ದೇಶಮಾನ್ಯ ಅವರು ಮಂಡಿಸಿದರು. ಅಲ್ಲದೆ ಈ ಸಮ್ಮೇಳನಕ್ಕೆ ಆಗಮಿಸಿದ ಎಲ್ಲಾ ಸಮ್ಮೇಳನಾರ್ಥಿಗಳನ್ನು, ಗಣ್ಯರನ್ನು, ನೆರೆದಿದ್ದ ಎಲ್ಲಾ ಸಭಿಕರನ್ನು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಯ ಸದಸ್ಯರುಗಳಾದ ಬಸನಗೌಡ ಬ್ಯಾಗವಾಟ್, ಮಲ್ಲೇಶ ಕೊಲಿಮಿ, ತಿಮ್ಮಪ್ಪ ಸೋಮಪ್ಪ ಚವಡಿ, ಡಾ.ಕೆ.ನಾರಾಯಣ ರಾವ್, ಡಾ. ಜಿ. ಬಿ. ಲೋಕೆಶ್ ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿವೃಂದ, ಪ್ರಾಧ್ಯಾಪಕವೃಂದ, ಸ್ನಾತಕೋತ್ತರ ವಿದ್ಯಾರ್ಥಿಗಳು ಇದ್ದರು.

# ಸರ್ವರ ಸರ್ವೋದಯ ಕುವೆಂಪು ಸಾಹಿತ್ಯದ ಸಾರ : ಪ್ರೊ. ಸರಿತಾ ಇಂಚೂರ

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಶ್ರೀ ಉಮಾಮಹೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶರಣಬಸವ ಗಣಾಚಾರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಸಾಪ ಅಧ್ಯಕ್ಷ, ಪ್ರಾಚಾರ್ಯ ವೀರೇಶ ಆದೋನಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಸಾಪ ಅಧ್ಯಕ್ಷ ಮಹಾದೇವಪ್ಪ ನಾಗರಹಾಳ, ಕು. ಪಾರ್ವತಿ, ಕಸಾಪದ ಮಹಿಳಾ ಪ್ರತಿನಿಧಿಗಳಾದ ಸವಿತಾ ಗೌಡರ, ಈರಮ್ಮ ಕುಂಬಾರ, ಗೌರವ ಕಾರ್ಯದರ್ಶಿ ಗಂಗಾಧರ ಪತ್ತಾರ, ಸದಸ್ಯ ಹ?ಮದ್ ಖಾದರಬಾಷಾ ಹಾಗೂ ಉಪನ್ಯಾಸಕರು ಇದ್ದರು.

### ಸಿರವಾರ ಪಟ್ಟಣದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವರು-ಶಾಸಕರಿಂದ ಭೂಮಿ ಪೂಜೆ

# ಸಿರವಾರ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಬದ್ಧ-ಎನ್.ಎಸ್.ಬೋಸರಾಜು

ಯುವಮಾರ್ಗ ಸುದ್ದಿ



**ಸಿರವಾರ, ಡಿ.29-** ನೂತನ ತಾಲ್ಲೂಕ ಕೇಂದ್ರವಾಗಿರುವ ಸಿರವಾರ ಪಟ್ಟಣವನ್ನು ಸಮಗ್ರ ಅಭಿವೃದ್ಧಿಯತ್ತ ಕೊಂಡೊಯ್ಯಲು ಶಾಸಕರು ಹಾಗೂ ನಾವು ಸಾಕಷ್ಟು ಅನುದಾನವನ್ನು ತಂದು, ಅಭಿವೃದ್ಧಿ ಕೆಲಸ-ಕಾರ್ಯಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ-ತಂತ್ರಜ್ಞಾನ ಇಲಾಖೆ ಸಚಿವ ಎನ್.ಎಸ್.ಬೋಸರಾಜು ಅವರು ಹೇಳಿದರು.

ಸಿರವಾರ ಪಟ್ಟಣದ ವ್ಯಾಪ್ತಿಯಲ್ಲಿ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಾಳದ 08 ಕೋಟಿ 60 ಲಕ್ಷ ರೂ. ವೆಚ್ಚದಲ್ಲಿ ಪ್ರಜಾ ಸೌಧ ನಿರ್ಮಾಣ, 05 ಕೋಟಿ ರೂ. ವೆಚ್ಚದಲ್ಲಿ ಸಿರವಾರದ ಮುಖ್ಯ ರಸ್ತೆ ಅಗಲೀಕರಣ, 02 ಕೋಟಿ ವೆಚ್ಚದಲ್ಲಿ ವಾಲ್ಮೀಕಿ ಭವನ ನಿರ್ಮಾಣ, 03 ಕೋಟಿ ರೂ. ವೆಚ್ಚದಲ್ಲಿ ಅಗ್ನಿಶಾಮಕ ಠಾಣೆ ನಿರ್ಮಾಣ, 03 ಕೋಟಿ ರೂ. ವೆಚ್ಚದಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯ ಕಟ್ಟಡ, 02 ಕೋಟಿ ರೂ.ವೆಚ್ಚದಲ್ಲಿ ಹೊರಂಗಾಣ ಕ್ರೀಡಾಂಗಣ, 50 ಲಕ್ಷ ರೂ. ವೆಚ್ಚದಲ್ಲಿ ಗ್ರಂಥಾಲಯ ನಿರ್ಮಾಣ ಸೇರಿದಂತೆ ಅಂದಾಜು 28 ಕೋಟಿ ರೂ. ಅಧಿಕ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಸೋಮವಾರ ಭೂಮಿಪೂಜೆ ನೇರವೇರಿಸಿ ಮಾತನಾಡಿದರು.

ಸಿರವಾರ ತಾಲ್ಲೂಕ ಕೇಂದ್ರವಾಗಿದ್ದು ಜನರಿಗೆ ಸರ್ಕಾರದ ಎಲ್ಲಾ ಸೇವೆ ಮತ್ತು ಸೌಲಭ್ಯಗಳನ್ನು ಒಂದೇ ಸೂರಿನ ಅಡಿಯಲ್ಲಿ ದೊರೆಯುವಂತೆ ಮಾಡುವ ಉದ್ದೇಶದಿಂದ 03 ಮಹಡಿಗಳ ಬೃಹತ್ ಪ್ರಜಾ ಸೌಧವನ್ನು ನಿರ್ಮಾಣ ಮಾಡಲಾಗುತ್ತಿದೆ, ಅದೇರೀತಿ ಕ್ರೀಡಾಭೀಮಾನಿಗಳ ಬಹುದಿನಗಳ ಕನಸಾಗಿರುವ ಕ್ರೀಡಾಂಗಣ ನಿರ್ಮಾಣಕ್ಕೂ ಸಹ ಚಾಲನೆ ನೀಡುವ ಮೂಲಕ ಕ್ರೀಡಾಭೀಮಾನಿಗಳ ಬಹುದಿನಗಳ ಕನಸನ್ನು ನನಸು ಮಾಡಲಾಗುತ್ತಿದೆ ಎಂದರು.

ಸಿರವಾರ ಪಟ್ಟಣದ ಮುಖ್ಯ ರಸ್ತೆಯ ಧೂಳಿನ ಸಮಸ್ಯೆಯನ್ನು ಮನಗಂಡು ಪ್ರಸ್ತುತ 05 ಕೋಟಿ ರೂ.ವೆಚ್ಚದಲ್ಲಿ ಭಾಗ್ಯನಗರ ಕ್ಯಾಂಪ್ ಕಾಲುವೆಯಿಂದ ಬಂಗ್ಲೆ ಹಳ್ಳದ ವರೆಗೆ ನಾಲ್ಕು ಚತುಷ್ಪತ ರಸ್ತೆ ನಿರ್ಮಾಣದ ಯೋಜನೆ ರೂಪಿಸಿದ್ದು, ಮುಂದಿನ ದಿನಗಳಲ್ಲಿ ಇನ್ನು 10 ಕೋಟಿ ರೂ.ಅನುದಾನವನ್ನು ಮಂಜೂರುಗೊಳಿಸಿ ಪ್ರಜಾ ಸೌಧದ ವರೆಗೆ ರಸ್ತೆ ಅಗಲೀಕರಣ ಮಾಡುವ ಗುರಿಯಿದೆ ಎಂದು ತಿಳಿಸಿದರು.

ಸಿರವಾರ ಪಟ್ಟಣದ ವ್ಯಾಪ್ತಿಯಲ್ಲಿ ಭೂಮಿ ಪೂಜೆ ಮಾಡಿದ ಎಲ್ಲಾ ಕಾಮಗಾರಿಗಳನ್ನು ಸಂಬಂಧಪಟ್ಟ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಕೂಡಲೇ ಕೆಲಸವನ್ನು ಪ್ರಾರಂಭಿಸಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಒಂದು ವೇಳೆ ನಿರ್ಲಕ್ಷವಹಿಸಿದರೇ ನಾನು ಎಲ್ಲಾ ಕಾಮಗಾರಿಗಳನ್ನು ವೀಕ್ಷಣೆ ಮಾಡಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ ಸೂಚನೆ ನೀಡಿದರು.

ನಂತರ ಶಾಸಕ ಜಿ.ಹಂಪಯ್ಯ ನಾಯಕ ಅವರು ಮಾತನಾಡಿ, ಮುಂದಿನ ದಿನಗಳಲ್ಲಿ ಸಿರವಾರ ತಾಲ್ಲೂಕ ಕೇಂದ್ರಕ್ಕೆ ಅಗತ್ಯವಿರುವ ಎಲ್ಲಾ ಇಲಾಖೆಯ ಸರ್ಕಾರಿ ಕಚೇರಿಗಳನ್ನು ಮಂಜೂರುಗೊಳಿಸಿ ಈ ತಾಲ್ಲೂಕಿನ ಜನರು ಮಾನ್ವಿ ತಾಲ್ಲೂಕಿಗೆ ತೆರಳುವುನ್ನು ತಪ್ಪಿಸುವುದಕ್ಕೆ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆಗೆ ಆಗಮಸಿದ ಸಚಿವ ಎನ್.ಎಸ್.ಬೋಸರಾಜು ಹಾಗೂ ಶಾಸಕ ಜಿ.ಹಂಪಯ್ಯ ನಾಯಕ ಅವರನ್ನು ತೆರೆದ ವಾಹನದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು-ಕಾರ್ಯಕರ್ತರು ದೇವದುರ್ಗ ಕ್ರಾಸ್ ನಿಂದ ವಿ.ಆರ್.ಎಸ್ ಶಾಲೆ ವರೆಗೆ ಬೈಕ್ ರ್ಯಾಲಿ ನಡೆಸಿ ಅದ್ದೂರಿಯಾಗಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಶಾಸಕ ಜಿ.ಹಂಪಯ್ಯ ನಾಯಕ, ತಹಸೀಲ್ದಾರ್ ಅಶೋಕ ಪವಾರ್, ಪ.ಪಂ.ಮಾಜಿ ಅಧ್ಯಕ್ಷ ವೈ.ಭೂಪನಗೌಡ, ಉಪಾಧ್ಯಕ್ಷ ಲಕ್ಷ್ಮಿ ಅದೆಪ್ಪ, ಪ.ಪಂ. ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ಪಂಚ ಗ್ಯಾರಂಟಿ ಯೋಜನೆ ತಾಲ್ಲೂಕ ಅಧ್ಯಕ್ಷ ಬ್ರಿಜೇಶ್ ಪಾಟೀಲ್, ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ, ಖಾಲಿದ್ ಸಾಬ್ ಮಾನ್ವಿ, ಗಫೂರ್ ಸಾಬ್ ಮಾನ್ವಿ, ಎನ್.ಗಿರಿಜಾ ಶಂಕರ್, ಶರಣಪ್ಪ ನಾಯಕ ಗುಡದಿನ್ನಿ, ಕಿರಿಲಿಂಗಪ್ಪ ಕವಿತಾಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚುಕ್ಕಿ ಶಿವಕುಮಾರ ಸಾಹುಕಾರ, ಶಿವಶರಣ ಸಾಹುಕಾರ ಅರಕೇರಿ, ದಾನನ ಗೌಡ, ಚಂದ್ರಶೇಖರ ಕುರ್ಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಪಟ್ಟಣ ಪಂಚಾಯತ್ ಸದಸ್ಯರು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.

# ವಶಿಷ್ಠಧಾಮದಿಂದ ನೂತನ ಕ್ಯಾಲೆಂಡರ್ ಬಿಡುಗಡೆ ಮತ್ತು ಸಾಧಕರಿಗೆ ಸನ್ಮಾನ

ಯುವಮಾರ್ಗ ಸುದ್ದಿ



**ಸಿಂದನೂರು,29-**ಸಾಮಾಜಿಕ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸೇವೆಗಳು ಇಂದಿನ ದಿನಮಾನಗಳಲ್ಲಿ ಪ್ರಚಾರ ಪಡೆಯುವುದು ಹಾಗೂ ಪ್ರಸಿದ್ಧಿ ಹೊಂದುವುದು ಆಗಿದೆ. ಆದರೆ ಯಶಸ್ವಿಯಾಗಿ ಜನಮಾನಸದಲ್ಲಿ ನಿರಂತರ ಬದಲಾವಣೆಗಳಿಗಾಗಿ ನಿಸ್ವಾರ್ಥ ಸಾಮಾಜಿಕ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸೇವೆಗಳಿಂದ ಯಶಸ್ವಿ ಕಾರ್ಯಕ್ರಮಗಳಾಗುತ್ತವೆ ಎಂದು ಬ್ರಾಹ್ಮಣ ಸಮಾಜದ ಮುಖಂಡರಾದ ದೋಟಿಹಾಳ ವೇಂಕಣ್ಣಾಚಾರ್ಯ ಜೋಷಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಸಿಂಧನೂರು ನಗರದ ಉಪ್ಪಾರವಾಡಿಯು ವಸಿಷ್ಠಧಾಮದಲ್ಲಿ 2026 ಹೊಸ ಕ್ಯಾಲೆಂಡರ್ ಬಿಡುಗಡೆ ವಶಿಷ್ಠಧಾಮ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಅತಿಥಿಗಳಾಗಿ ಮಾತನಾಡಿ ವಶಿಷ್ಠಧಾಮ ಬ್ರಾಹ್ಮಣ ಸಮಾಜದ ಹೆಮ್ಮೆಯ ಸಂಸ್ಥೆಯಾಗಿದೆ. ಚಿಕ್ಕಮಕ್ಕಳಿಗೆ ಆಟಪಾಠ ನೀತಿಕಥೆಗಳನ್ನು ಹೇಳುವ ಮೂಲಕ ನಿರಂತರ ಕಾರ್ಯಚಟುವಟಿಕೆ ನಡೆಸುವಲ್ಲಿ ವಶಿಷ್ಯಧಾಮ ಸಮಾಜದಲ್ಲಿ ಮುಖ್ಯಪಾತ್ರ ವಹಿಸಿದೆ ಎಂದರು.

ವಶಿಷ್ಠಧಾಮ ಸೇವಾಟ್ರಸ್ಟ್ ಅಧ್ಯಕ್ಷರಾದ ಭೀಮಸೇನಾಚಾರ್ಯ ನವಲಿ ಮಾತನಾಡಿ ಮಕ್ಕಳಿಗೆ ಜ್ಞಾನಶಕ್ತಿ. ಇಚ್ಛಾಶಕ್ತಿ ಹಾಗೂ ಕ್ರೀಯಾಶಕ್ತಿಯಿಂದ ಮಕ್ಕಳಲ್ಲಿ ಒಳ್ಳೆಯ ಮನಸ್ಸು ಬರುತ್ತದೆ. ಒಳ್ಳೆಯ ವಿಚಾರಗಳು ಮನಸ್ಸಿಗೆ ಹಾಕಿದರೆ ಸಮಾಜದಲ್ಲಿ ಒಳ್ಳೆಯ ಕೆಲಸ ಮಾಡಬಹುದಾಗಿದೆ ಇದರಿಂದ ಸಮಾಜದಲ್ಲಿ ವಿಶೇಷ ವ್ಯಕ್ತಿಗಳಾಗಿ ರಾಷ್ಟ್ರಕ್ಕೆ ಸೇವೆಯನ್ನು ಸಲ್ಲಿಸಬಹುದಾಗಿದೆ ಎಂದರು.

ಸಾವಯವ ಕೃಷಿಕರಾದ ಬಸ್ಸಪ್ಪ ಅಯ್ಯಪ್ಪ ವಂಕಲಕುಂಟಿ ಕೊಪ್ಪಳ ಇವರಿಗೆ ವಶಿಷ್ಠಧಾಮ ಕೃಷಿರತ್ನಾಕರ, ದಾಸಸಾಹಿತ್ಯ ನಿರಂತರ ಪ್ರಚಾರಮಾಡುವ ಸಂಪದಾ ಕುಲಕರ್ಣೀ ಸಿದ್ಧಾಂಪುರ ಇವರಿಗೆ ವಶಿಷ್ಠಧಾಮ ಹರಿದಾಸರತ್ನ ಹಾಗೂ ಸಾಮಾಜಿಕ ಕಾರ್ಯಕ್ರಮಗಳ ಸೇವೆಯನ್ನು ಮಾಡುತ್ತಿರುವ ಹನುಮೇಶ ಜಾಗೀರದಾರ ಅವರಿಗೆ ವಶಿಷ್ಠಧಾಮ ವಿಪ್ರಯುವರತ್ನ ಪ್ರಶಸ್ತಿ ನೀಡಲಾಯಿತು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಕೃಷಿಕ ಬಸ್ಸಪ್ಪ ಅಯ್ಯಪ್ಪ ಮಾತನಾಡಿ ಇಂದು ನಾವು ಊಟಮಾಡುವ ಪದಾರ್ಥಗಳು ವಿಷಮಯವಾಗಿದೆ. ನಾನು ಸಂಪೂರ್ಣ ಸಾವಯವ ಗೊಬ್ಬರದಿಂದ ಹೊಲದಲ್ಲಿ ಅನೇಕ ರೀತಿಯ ಬೆಳೆಗಳನ್ನು ಬೆಳೆದು ರಾಜ್ಯಮಟ್ಟದ ರಾಷ್ಟಮಟ್ಟದ ಹಾಗೂ ವಿದೇಶಗಳಲ್ಲಿ ನನ್ನ ಅನುಭವಗಳನ್ನು ತಿಳಿಸುವ ಮೂಲಕ ಅನೇಕ ರೈತರಿಗೆ ಮಾದರಿಯಾಗಿದ್ದೇನೆ ಎಂದರು.

ಸಂಪದಾ ಕುಲಕರ್ಣಿ ಹಾಗೂ ಹನುಮೇಶ ಜಾಹಗೀರದಾರ ಮಾತನಾಡಿ ವಶಿಷ್ಠಧಾಮ ಪ್ರಶಸ್ತಿಯಿಂದ ನಮಗೆ ಸಮಾಜದಲ್ಲಿ ಸೇವೆ ಸಲ್ಲಿಸಲು ಪ್ರೇರಣೆಯಾಗಿದೆ ಎಂದರು.

ಬ್ರಾಹ್ಮಣ ಸಮಾಜದ ಅಧ್ಯಕ್ಷರಾದ ಗೋವಿಂದರಾವ ಕುಲಕರ್ಣಿ, ವೆಂಕಟರಾವ್ ರಾಜು ಬಂಡಿ, ಪ್ರಭಾಕರ ಕುಲಕರ್ಣಿ, ಪಾಂಡುರಂಗ ದೇಸಾಯಿ ಹಾಗೂ ಗುರುರಾಜ ಕುಲಕರ್ಣಿ ಕಾರ್ಯಕ್ರಮದ ಕುರಿತು ಮಾತನಾಡಿದರು. ಪ್ರಹ್ಲಾದ ಕುಲಕರ್ಣಿ, ಶರಣಬಸವ ಮಸ್ಕಿ, ಸಣ್ಣಮಲ್ಲಪ್ಪ ಮಾಡಗಿರಿ, ಶಂಕರಸಾ ಕಾಟವ, ಜಯತೀರ್ಥದಾಸ, ಬಸವರಾಜ ನಿಪ್ಪಾಣಿ, ಶ್ರೀನಿವಾಸ ಹೊಗಿಬಂಡಿ, ರಮಾಕಾಂತ ಪುರೋಹಿತ, ಭೀಮಸೇನ ಜಾಹಗೀರದಾರ ಉಪಸ್ಥಿತರಿದ್ದರು. ವಶಿಷ್ಠಧಾಮದ ಸತ್ಯನಾರಾಯಣಾಚಾರ್ಯ ನವಲಿ, ಭಾರದ್ವಾಜ ಉಪ್ಪಳ, ಶೋಭಾ ನವಲಿ ಹಾಗೂ ಅ0ಜನಾ ನವಲಿ ಅತಿಥಿಗಳಿಗೆ ಪುಷ್ಪ ಸಮರ್ಪಣೆ ಮೂಲಕ ಸ್ವಾಗತಿಸಿದರು. ಸಾವಿತ್ರಿ ದೀಕ್ಷಿತ್ ವಶಿಷ್ಠಧಾಮ ಗುರುಕುಲ ಮಕ್ಕಳಿಗೆ ಹಾಡು ನೃತ್ಯ ಸಾಂಸಕೃತಿಕ ಕಾರ್ಯಕ್ರಮಗಳು ಜರುಗಿಸುವ ಮೂಲಕ ಕಾರ್ಯಕ್ರಮ ನಿರೂಪಿಸಿದರು. ಸಹನಾ ಪೂಜಾರಿ ಪ್ರಾರ್ಥನಾ ಗೀತೆ ಹಾಡಿದರು.

# ಸನ್ ರೈಸ್ ಕಾಲೇಜಿನಲ್ಲಿ ನಾಯಿ ಕಚ್ಚು, ಹಾವು ಕಚ್ಚು ಹಾಗೂ ಡೆಂಗ್ಯೂ ಕುರಿತು ಜಾಗೃತಿ ಕಾರ್ಯಕ್ರಮ




ಯುವಮಾರ್ಗ ಸುದ್ದಿ

**ಸಿಂಧನೂರು : ಡಿ 29:** ತಾಲ್ಲೂಕು ಆರೋಗ್ಯ ಕಚೇರಿಯ ಮಾರ್ಗದರ್ಶನದಲ್ಲಿ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್, ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ನಾಯಿ ಕಚ್ಚು ಮತ್ತು ಹಾವು ಕಚ್ಚು ತಡೆ ಹಾಗೂ ಚಿಕಿತ್ಸೆ ಕುರಿತು ಜಾಗೃತಿ ಕಾರ್ಯಕ್ರಮ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಜಾಗೃತಿ ಉಪನ್ಯಾಸವನ್ನು ಶ್ರೀ ನಿಖಿಲ್ ಮಹಾಮಾರಿ ತಜ್ಞರು, ತಾಲ್ಲೂಕು ಆರೋಗ್ಯ ಕಚೇರಿ ಸಿಂಧನೂರು ಅವರು ನಡೆಸಿಕೊಟ್ಟರು.

ಉಪನ್ಯಾಸದಲ್ಲಿ ಅವರು ನಾಯಿ ಕಚ್ಚು ಹಾಗೂ ಹಾವು ಕಚ್ಚಿನ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ತಕ್ಷಣದ ಪ್ರಥಮ ಚಿಕಿತ್ಸೆ, ತಪ್ಪಿಸಬೇಕಾದ ಅನೈಜ್ಞಾನಿಕ ಪದ್ಧತಿಗಳು, ಸಮಯಕ್ಕೆ ಸರಿಯಾಗಿ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ತೆರಳುವ ಅಗತ್ಯತೆ ಮತ್ತು ಲಸಿಕೆ/ಂಟಿ ವೆನಮ್ ಚಿಕಿತ್ಸೆಯ ಮಹತ್ವವನ್ನು ವಿವರಿಸಿದರು. ಸಾರ್ವಜನಿಕರು ಭಯಪಡದೇ, ಜಾಗೃತಿಯಿಂದ ಸರಿಯಾದ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಅದೇ ಕಾರ್ಯಕ್ರಮದಲ್ಲಿ ಡೆಂಗ್ಯೂ ಜಾಗೃತಿ ಉಪನ್ಯಾಸವನ್ನು ಅಬ್ದುಲ್ ರಹಿಮಾನ್ ಹಣಗಿ ಅವರು ನೀಡಿದರು. ಡೆಂಗ್ಯೂ ರೋಗದ ಹರಡುವ ವಿಧಾನ, ಲಕ್ಷಣಗಳು, ಅಪಾಯ ಸೂಚನೆಗಳು ಹಾಗೂ ತಡೆಗಟ್ಟುವ ಕ್ರಮಗಳ ಕುರಿತು ವಿವರಿಸಿ, ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆ ಕಟ್ಟುವುದರ ಮೂಲಕ ತಡೆಯುವುದು ಹಾಗೂ ಜ್ವರ ಕಾಣಿಸಿಕೊಂಡ ಕೂಡಲೇ ಆರೋಗ್ಯ ಕೇಂದ್ರಕ್ಕೆ ವರದಿ ಮಾಡುವ ಅಗತ್ಯತೆಯನ್ನು ತಿಳಿಸಿದರು. ಕಾರ್ಯಕ್ರಮದ ಆರಂಭದಲ್ಲಿ ಸ್ವಾಗತ ಹಾಗೂ ಪರಿಚಯವನ್ನು ಲಾಜರ್ ಸಿರಿಲ್ ಜಿ ಅವರು ನೀಡಿದರು. ಸಮುದಾಯದ ಆರೋಗ್ಯ ರಕ್ಷಣೆಯಲ್ಲಿ ಇಂತಹ ಜಾಗೃತಿ ಕಾರ್ಯಕ್ರಮಗಳ ಪಾತ್ರ ಅತ್ಯಂತ ಮಹತ್ವದ್ದು ಎಂದು ಅವರು ತಿಳಿಸಿ, ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸುವಂತೆ ಮನವಿ ಮಾಡಿದರು.

ಈ ಜಾಗೃತಿ ಕಾರ್ಯಕ್ರಮವು ಸಾರ್ವಜನಿಕರಲ್ಲಿ ನಾಯಿ ಕಚ್ಚು, ಹಾವು ಕಚ್ಚು ಹಾಗೂ ಡೆಂಗ್ಯೂ ಕುರಿತು ಅರಿವು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಿತು. ಕಾರ್ಯಕ್ರಮದಲ್ಲಿ ತಾಲೂಕ ಆರೋಗ್ಯ ಅಧಿಕಾರಿಗಳ ಕಚೇರಿಯ ಅಧಿಕಾರಿಗಳಾದಂತ ಶ್ರೀ ನಿಖಿಲ್ ಹೊಸಮನಿ ಎಂಡೊಮೊಲಜಿಸ್ಟ್ ರೋಗವಾಹಕ ಆಶ್ರಿತ ಕಾರ್ಯಕ್ರಮದ ಮೇಲ್ವಿಚಾರಕರು ಆದ ಶ್ರೀ ಹಣಗಿ ಮತ್ತು ಸನ್ ರೈಸ್ ವಿದ್ಯಾಸಂಸ್ಥೆಯ ಕಾರ್ಯದರ್ಶಿಗಳಾದ ಇರ್ಷಾದ್ ಕೆ ಅತ್ತಾರ್ ಹಾಗೂ ಎಲ್ಲಾ ಉಪನ್ಯಾಸಕರುಗಳು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಕುವೆಂಪು ಅವರ ಆದರ್ಶಗಳನ್ನು ಸ್ಮರಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಮಸ್ಕಿಯಲ್ಲಿ ಕೆ.ಶಿವನಗೌಡ ನಾಯಕ ಅಭಿಮಾನಿ ಬಳಗದಿಂದ ಹೊಸ ವರ್ಷದ ಕ್ಯಾಲೆಂಡರ್ ಹಂಚಿಕೆ



ಯುವಮಾರ್ಗ ಸುದ್ದಿ

**ಮಸ್ಕಿ ,ಡಿ.29-** ದೇವದುರ್ಗ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಕೆ. ಶಿವನಗೌಡ ನಾಯಕ ಅವರ ಅಭಿಮಾನಿ ಬಳಗದಿಂದ 2026ರ ಹೊಸ ವರ್ಷದ ಕ್ಯಾಲೆಂಡರನ್ನು ಕ್ಷೇತ್ರದ ಪ್ರತಿಯೊಂದು ಹಳ್ಳಿಗಳಲ್ಲಿ ಹಂಚಿಕೆ ಮಾಡಲಾಗುತ್ತಿದೆ ಎಂದು ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷ ಶಿವಣ್ಣ ನಾಯಕ ವೆಂಕಟಾಪೂರು ತಿಳಿಸಿದರು.

ಕೆ.ಶಿವನಗೌಡ ನಾಯಕ ಅವರು ತಮ್ಮ ಅಧಿಕಾರ ಅವಧಿಯಲ್ಲಿ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದು ಆದ್ದರಿಂದ ಇಂದು ರಾಯಚೂರು ಜಿಲ್ಲೆಯ ಪ್ರತಿಯೊಂದು ಕ್ಷೇತ್ರದಲ್ಲಿ ಹಾಗೂ ಪ್ರತಿಯೊಂದು ಹಳ್ಳಿಗಳಲ್ಲಿಯೂ ಅವರ ಅಭಿಮಾನಿಗಳು ಇದ್ದಾರೆ. ನಾವು ಕೂಡ ಕೆ ಶಿವನಗೌಡ ನಾಯಕರು ಅಭಿಮಾನಿಗಳು ಆದ್ದರಿಂದ ನಾವು ಅವರ ಮೇಲಿನ ಅಭಿಮಾನದಿಂದ ನೂತನ ವರ್ಷದ ಕ್ಯಾಲೆಂಡರ್ ಅನ್ನು ಮಸ್ಕಿ ಕ್ಷೇತ್ರದಲ್ಲಿ ಬಿಡುಗಡೆ ಮಾಡಿ ಪ್ರತಿಯೊಬ್ಬ ಅವರ ಅಭಿಮಾನಿಗಳಿಗೂ ನೂತನ ವರ್ಷದ ಕ್ಯಾಲೆಂಡರ್ ಅನ್ನು ತಲುಪಿಸುವ ಕಾರ್ಯವನ್ನು ಅಭಿಮಾನಿಗಳ ಬಳಗದಿಂದ ಹಂಚಿಕೆ ಮಾಡಲಾಗುತ್ತಿದೆ.

ಶಿವನಗೌಡ ನಾಯಕ ಅವರ ಅಭಿಮಾನಿಗಳು ಸ್ವಯಂ ಪ್ರೇರಣೆಯಿಂದ ಕಳೆದ ಎರಡ್ಮೂರು ದಿನಗಳಿಂದ ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ಕ್ಯಾಲೆಂಡರ್ ಹಂಚಿಕೆ ಮಾಡಿದ್ದಾರೆ. ಅದೇ ರೀತಿಯಾಗಿ ಕ್ಷೇತ್ರದ ಪ್ರತಿಯೊಂದು ಹಳ್ಳಿಗೂ 2026ರ ಹೊಸ ವರ್ಷದ ಕ್ಯಾಲೆಂಡರ್ ನ್ನು ತಲುಪಿಸಲಾಗುತ್ತದೆ ಎಂದು ತಿಳಿಸಿದರು.

# ರಕ್ಷಣಾ ಕ್ಷೇತ್ರದಲ್ಲಿ ಅದಾನಿ 1.8 ಲಕ್ಷ ಕೋಟಿ ಹೂಡಿಕೆ



**ನವದೆಹಲಿ,ಡಿ.29–**ಏಷ್ಯಾದ ಎರಡನೇ ಅತ್ಯಂತ ಶ್ರೀಮಂತ ಕೈಗಾರಿಕೋದ್ಯಮಿ ಗೌತಮ್ ಅದಾನಿ, ರಕ್ಷಣಾ ವಲಯದಲ್ಲಿ 1.8 ಲಕ್ಷ ಕೋಟಿ ಹೂಡಿಕೆ ಮಾಡಲು ಯೋಜಿಸಿದ್ದಾರೆ. ಈ ಹೂಡಿಕೆಯು ಮಾನವರಹಿತ ವ್ಯವಸ್ಥೆಗಳು ಮತ್ತು ಸುಧಾರಿತ ಶಸ್ತ್ರಾಸ್ತ್ರಗಳ ಸಾಮರ್ಥ್ಯಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ.

ಅದಾನಿ ಡಿಫೆನ್ಸ್ & ಏರೋಸ್ಪೇಸ್ ವೇಗವರ್ಧಿತ ನಿಯೋಜನೆಯತ್ತ ಸಾಗಿದೆ ಮತ್ತು 2025 ರಲ್ಲಿ ಭಾರತೀಯ ನೌಕಾಪಡೆ ಮತ್ತು ಸೇನೆಗೆ ದೃಷ್ಟಿ 10 ಯುಎವಿಯನ್ನು ಸೇರಿಸಲು ಯೋಜಿಸಿದೆ. 2026 ರ ವೇಳೆಗೆ ಭಾರತದ ಖಾಸಗಿ ರಕ್ಷಣಾ ಮಾರುಕಟ್ಟೆಯಲ್ಲಿ ಶೇ. 25 ಪಾಲನ್ನು ವಶಪಡಿಸಿಕೊಳ್ಳುವ ಗುರಿಯನ್ನು ಅದಾನಿ ಹೊಂದಿದೆ.

ಮೂಲಗಳ ಪ್ರಕಾರ, ಕಂಪನಿಯು ಮುಂದಿನ ವರ್ಷ ಮಾನವರಹಿತ ಮತ್ತು ಸ್ವಾಯತ್ತ ವ್ಯವಸ್ಥೆಗಳು, ಸುಧಾರಿತ ಮಾರ್ಗದರ್ಶಿ ಶಸ್ತ್ರಾಸ್ತ್ರಗಳು, ಸಂವೇದಕಗಳು ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಎಐ–ಆಧಾರಿತ ಬಹು–ಡೊಮೇನ್ ಕಾರ್ಯಾಚರಣೆಗಳ ಅಭಿವೃದ್ಧಿಯಲ್ಲಿ ಹೂಡಿಕೆ ಮಾಡಲಿದೆ. ಗಾಳಿ, ಸಮುದ್ರ ಮತ್ತು ಭೂಮಿಯಲ್ಲಿ ಕಾರ್ಯನಿರ್ವಹಿಸುವ ಈ ಸ್ವಾಯತ್ತ ವ್ಯವಸ್ಥೆಗಳು ಕನಿಷ್ಠ ಮಾನವ ಹಸ್ತಕ್ಷೇಪದೊಂದಿಗೆ ಕಾರ್ಯನಿರ್ವಹಿಸುತ್ತವೆ, ಪಡೆಗಳಿಗೆ ಅಪಾಯವನ್ನು ಕಡಿಮೆ ಮಾಡುತ್ತದೆ ಮತ್ತು ಮಿಲಿಟರಿ ವ್ಯಾಪ್ತಿಯನ್ನು ವಿಸ್ತರಿಸುತ್ತವೆ.

ಅದಾನಿ ಡಿಫೆನ್ಸ್ ಮತ್ತು ಏರೋಸ್ಪೇಸ್ ಭಾರತದ ಅತಿದೊಡ್ಡ ಖಾಸಗಿ ರಕ್ಷಣಾ ಕಂಪನಿಯಾಗಿದೆ. ಇದರ ಸಾಮರ್ಥ್ಯಗಳು ಮಾನವರಹಿತ ವೈಮಾನಿಕ ಮತ್ತು ಜಲಚರ ವ್ಯವಸ್ಥೆಗಳು, ಪ್ರತಿಬಂಧಕ ಯುಎಎಸ್ ಪರಿಹಾರಗಳು, ಮಾರ್ಗದರ್ಶಿ ಶಸ್ತ್ರಾಸ್ತ್ರಗಳು, ಸಣ್ಣ ಶಸ್ತ್ರಾಸ್ತ್ರಗಳು, ಮದ್ದುಗುಂಡುಗಳು ಮತ್ತು ವಿಮಾನ ನಿರ್ವಹಣೆಯನ್ನು ಒಳಗೊಂಡಿವೆ. 2025 ರಲ್ಲಿ, ಕಂಪನಿಯ ದೃಷ್ಟಿ 10 ಯುಎವಿಯನ್ನು ದೀರ್ಘ–ಶ್ರೇಣಿಯ ಗುಪ್ತಚರ, ಕಣ್ಗಾವಲು ಮತ್ತು ವಿಚಕ್ಷಣ ಕಾರ್ಯಾಚರಣೆಗಳಿಗಾಗಿ ಭಾರತೀಯ ನೌಕಾಪಡೆ ಮತ್ತು ಸೈನ್ಯಕ್ಕೆ ಸೇರಿಸಲಾಗುವುದು.

2026 ರ ವೇಳೆಗೆ, ಅದಾನಿ ಸಂಸ್ಥೆಯು ಡ್ರೋನ್‌ಗಳ ಮೂಲಕ ಗಾಳಿ, ನೀರು ಮತ್ತು ಭೂಮಿಯಲ್ಲಿ ತನ್ನ ನಿಖರ ದಾಳಿ ಸಾಮರ್ಥ್ಯಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಹೆಚ್ಚುವರಿಯಾಗಿ, ಸೇವಾ ಮತ್ತು ತರಬೇತಿ ಕೇಂದ್ರಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಮತ್ತು ಎಐ ಆಧಾರಿತ ವ್ಯವಸ್ಥೆಗಳು ಕಾರ್ಯಾಚರಣೆಯನ್ನು ಸುಧಾರಿಸುತ್ತವೆ. ವರದಿಗಳ ಪ್ರಕಾರ, ಈ ಕ್ರಮಗಳು ರಕ್ಷಣಾ ವಲಯವನ್ನು ಬಲಪಡಿಸುತ್ತವೆ ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತವೆ. ಭಾರತದ ಖಾಸಗಿ ರಕ್ಷಣಾ ಮಾರುಕಟ್ಟೆಯಲ್ಲಿ ಶೇ. 25 ರಷ್ಟು ಪಾಲನ್ನು ವಶಪಡಿಸಿಕೊಳ್ಳುವ ಗುರಿಯನ್ನು ಕಂಪನಿ ಹೊಂದಿದೆ.

# ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಅವ್ಯವಸ್ಥೆ, ಅವ್ಯವಹಾರ: ಕ್ರಮಕ್ಕೆ ಆಗ್ರಹಿಸಿ ಸಚಿವರಿಗೆ ಮನವಿ



**ಕಲಬುರಗಿ,ಡಿ.29–** ತಾಲೂಕು ಸಮಾಜ ಕಲ್ಯಾಣ ಇಲಾಖೆಯಡಿ ನಡೆಯುವ ವಸತಿ ನಿಲಯಗಳಲ್ಲಿ ಅವ್ಯವಸ್ಥೆ ಮತ್ತು ಅವ್ಯವಹಾರಗಳ ಕುರಿತು ತನಿಖೆ ಕೈಗೊಂಡು ತಪ್ಪಿತಸ್ಥ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಯನ್ನು ಇಲ್ಲಿಂದ ತಕ್ಷಣ ವರ್ಗಾಯಿಸುವಂತೆ ಆಗ್ರಹಿಸಿ ವೀರ ಕನ್ನಡಿಗರ ಸೇನೆ ಅಧ್ಯಕ್ಷ ಅಮೃತ ಸಿ.ಪಾಟೀಲ ಸಿರನೂರ ನೆತೃತ್ವದ ನಿಯೋಗ ಸಮಾಜ ಕಲ್ಯಾಣ ಇಲಾಖೆಯ ಸಚಿವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ.

ವಸತಿ ನಿಲಯಗಳ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ವ್ಯತ್ಯಾಸ ತೋರಿಸುವ ಮೂಲಕ ಅನುದಾನ ದುರುಪಯೋಗ, ವಸತಿ ನಿಲಯಗಳ ಸುಣ್ಣಬಣ್ಣ, ನಕಲಿ ಬಿಲ್ಲು, ಕಳಪೆ ಆಹಾರ ಮತ್ತು ವಸ್ತುಗಳ ಪೂರೈಕೆ ಸೇರಿದಂತೆ ಗುತ್ತಿಗೆ ನೌಕರರ ವೇತನದಲ್ಲಿಯೂ ಹಣಕಾಸಿನ ವ್ಯವಹಾರ ನಡೆಸಿರುವ ತಾಲೂಕು ಸಮಾಜ ಕಲ್ಯಾಣ ಅಧಿಕಾರಿಯ ವಿರುದ್ಧ ಪ್ರಕರಣ ದಾಖಲಿಸಿ ಸಮಗ್ರ ತನಿಖೆ ಕೈಗೊಳ್ಳಬೇಕು ಮತ್ತು ಅವರನ್ನು ಇಲ್ಲಿನ ಹುದ್ದೆಯಿಂದ ಬಿಡುಗಡೆ ಮಾಡಿ ವರ್ಗಾಯಿಸಬೇಕು ಎಂಬ ಪ್ರಮುಖ ಬೇಡಿಕೆಯ ಮನವಿ ಪತ್ರವನ್ನು ಸಚಿವರಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸೇನೆ ಉಪಾಧ್ಯಕ್ಷ ರವಿ ಒಂಟಿ, ಶಿವಾಜಿ ಚವ್ಹಾಣ, ಶಿವಾನಂದ ಚಿಕ್ಕಾಣಿ, ಅಣವೀರ ಬಿರಾದಾರ, ಪ್ರಶಾಂತ ಬಾಚನಳ್ಳಿ, ಸುಧೀರ ನವನಳ್ಳಿ, ಖಾಜಾ ಹುಸೇಣ, ಆಈಫ್ ಖಾನ, ರಜನಿಕಾಂತ ಬುವಿ ಸೇರಿದಂತೆ ಹಲವರಿದ್ದರು.

# 2.50 ಕೋಟಿ ರೂ. ಡ್ರಗ್ಸ್ ಜಪ್ತಿ: ಇಬ್ಬರ ಬಂಧನ




**ಬೆಂಗಳೂರು,ಡಿ.29–**ಹೊಸವರ್ಷದ ಸಂಭ್ರಮಾಚರಣೆ ಹಿನ್ನಲೆಯಲ್ಲಿ ಡ್ರಗ್ಸ್ ವಿರುದ್ಧ ಕಾರ್ಯಾಚರಣೆ ತೀವ್ರಗೊಳಿಸಿರುವ ಸಿಸಿಬಿ ಪೊಲೀಸರು ವಿದೇಶಿ ಪ್ರಜೆ ಅಮೆಜಾನ್ ಡಿಲವರಿ ಬಾಯ್ ಸೇರಿ ಇಬ್ಬರು ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿ 2.50 ಕೋಟಿ ಮೌಲ್ಯದ ಮಾದಕವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ನೈಜೀರಿಯಾದ ಒಕೇ ಕ್ರಿಸ್ಟೋಫರ್(45) ಹಾಗೂ ತಮಿಳುನಾಡು ಮೂಲದ ಹೆಚ್ ಎಸ್ ಆರ್ ಲೇಔಟ್ ನ ನವೀನ್ ರಾಜ್ (26)

ಬಂಧಿತ ಆರೋಪಿಗಳಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಬಂಧಿತ ಡ್ರಗ್ ಫೆಡ್ಲರ್ ಗಳಿಂದ 2 ಲಕ್ಷ ನಗದು ಸೇರಿ 2.50 ಕೋಟಿ ಮೌಲ್ಯದ 1 ಕೆ.ಜಿ 70 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 60 ಎಕ್ಸ್ ಟೆಸಿ ಪಿಲ್ಸ್ ಗಳು, 100 ಎಲ್‌ಎಸ್ ಡಿ ಸ್ಟ್ರಿಪ್ಸ್ ಗಳು. 5 ಗ್ರಾಂ ಕೊಕೇನ್, 2 ಮೊಬೈಲ್ ಫೋನ್, 1 ಲ್ಯಾಪ್ಟಾಪ್, ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿ ನೈಜೀರಿಯಾದ ಒಕೇ ಕ್ರಿಸ್ಟೋಫರ್ ನನ್ನು ಬಂಧಿಸಿ ಆತನಿಂದ 1 ಕೆ.ಜಿ 70 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 60 ಎಕ್ಸ್ ಟೆಸಿ ಪಿಲ್ಸ್‌ಗಳು, 2 ಲಕ್ಷ ನಗದು, ಕೃತ್ಯಕ್ಕೆ ಬಳಸುತ್ತಿದ್ದ । ಮೊಬೈಲ್, 1 ಲ್ಯಾಪ್‌ಟಾಪ್ ಸೇರಿ 2.25 ಕೋಟಿ ಮೌಲ್ಯದ ಮಾಲುಗಳನ್ನು ಜಪ್ತಿ ಮಾಡಲಾಗಿದೆ.

ಬಂಧಿತ ವಿದೇಶಿ ವ್ಯಕ್ತಿಯು ಕಳೆದ ವರ್ಷ ಬಿಸಿನೆಸ್ ವೀಸಾದಡಿ ಭಾರತಕ್ಕೆ ಬಂದು. ದೆಹಲಿ ಮತ್ತು ಮುಂಬೈನಲ್ಲಿ ವಾಸವಿದ್ದ ವಿದೇಶಿ ಪ್ರಜೆಗಳಿಂದ ಕಡಿಮೆ ಬೆಲೆಗೆ ಎಂಡಿಎಂಎ ಖರೀದಿಸಿ, ನೂತನ ವರ್ಷಾಚರಣೆಯ ಸಂದರ್ಭದಲ್ಲಿ ಆತನ ಪರಿಚಯಸ್ಥ ಗಿರಾಕಿಗಳಿಗೆ ಸರಬರಾಜು ಮಾಡಲು ತಯಾರಿ ನಡೆಸಿದ್ದನು.

ಈತನ ವಿರುದ್ಧ ಈ ಹಿಂದೆಯೂ ಸಹ ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಎನ್.ಡಿ.ಪಿ.ಎಸ್ ಪ್ರಕರಣ ದಾಖಲಾಗಿ ನ್ಯಾಯಾಂಗ ಬಂಧನದಲ್ಲಿದ್ದು, ಬಿಡುಗಡೆಯಾಗಿ ಬಂದ ನಂತರವು ಸಹ ಮತ್ತೆ ಡ್ರಗ್ ಪೆಡ್ಲಿಂಗ್‌ನಲ್ಲಿ ತೊಡಗಿರುವುದನ್ನು ಬಾಯ್ಬಿಟ್ಟಿದ್ದು. ಈತನ ವಿರುದ್ಧ ಸೋಲದೇವನಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆಯನ್ನು ಮುಂದುವರೆಸಲಾಗಿದೆ ಎಂದು ಹೇಳಿದರು

ಡೆಲಿವರಿ ಬಾಯ್ ಸೆರೆ:ಬಂಡೇಪಾಳ್ಯದಲ್ಲಿ ಕಾರ್ಯಾಚರಣೆ ಕೈಗೊಂಡು ತಮಿಳುನಾಡು ಮೂಲದ ನವೀನ್ ರಾಜ್ ನನ್ನು ಬಂಧಿಸಿ ಆತನಿಂದ 25 ಲಕ್ಷ ಮೌಲ್ಯದ 100 ಎಲ್.ಎಸ್.ಡಿ ಸ್ಟ್ರಿಪ್‌ಗಳು, 5 ಗ್ರಾಂ ಕೊಕೇನ್ ಹಾಗೂ ಕೃತ್ಯಕ್ಕೆ ಬಳಸಲಾಗುತ್ತಿದ್ದ 1 ಮೊಬೈಲ್ ವಶಪಡಿಸಿಕೊಳ್ಳಲಾಗಿದೆ.

ಆರೋಪಯು ಬೆಂಗಳೂರಿನಲ್ಲಿ ಅಮೆಜಾನ್ ಕಂಪನಿಯಲ್ಲಿ ಡೆಲಿವರಿ ಬಾಯ್ ಕೆಲಸ ಮಾಡಿಕೊಂಡಿದ್ದು, ಅಪರಿಚಿತ ವ್ಯಕ್ತಿಗಳಿಂದ ಕಡಿಮೆ ಬೆಲೆಗೆ ಎಲ್ ಎಸ್ ಡಿ ಸ್ಟ್ರಿಪ್ಪಗಳು ಹಾಗೂ ಕೊಕೇನ್ನನ್ನು ಖರೀದಿಸಿ, ಪರಿಚಯಸ್ಥ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದಿಸುತ್ತಿದ್ದನು ಈತನ ವಿರುದ್ಧ ಬಂಡೇಪಾಳ್ಯ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆಯನ್ನು ಮುಂದುವರೆಸಲಾಗಿದೆ ಎಂದು ಹೇಳಿದರು.

ಜಂಟಿ ಪೊಲೀಸ್ ಆಯುಕ್ತ ಅಜಯ್ ಹಿಲೋರಿ ಡಿಸಿಪಿ ರಾಜಾ ಇಮಾಮ್ ಖಾಸೀಂ ಮಾರ್ಗದರ್ಶನದಲ್ಲಿ ಸಿಸಿಬಿ ಸಿಬ್ಬಂದಿ ಕಾರ್ಯಾಚರಣೆ ಕೈಗೊಂಡಿದೆ ಎಂದು ಹೇಳಿದರು.

# ಸತ್ಯ, ನ್ಯಾಯ ಪ್ರಾಮಾಣಿಕತೆಯನ್ನು ಜನರಿಗೆ ತಲುಪಿಸುವ ಕಾರ್ಯ ಮಾಧ್ಯಮಗಳದ್ದು:ಶಿವಾನಂದ ತಗಡೂರು




**ಬಳ್ಳಾರಿ, ಡಿ.29–** ಪತ್ರಕರ್ತರು ಸಮಾಜದ ಕಣ್ಣು, ಕಿವಿಗಳಾಗಿದ್ದು, ಸತ್ಯ, ನ್ಯಾಯ ಮತ್ತು ಪ್ರಾಮಾಣಿಕತೆಯನ್ನು ಜನಸಾಮಾನ್ಯರಿಗೆ ತಲುಪಿಸುವ ಮಹತ್ತರ ಹೊಣೆಗಾರಿಕೆ ಮಾಧ್ಯಮಗಳದ್ದಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಅಧ್ಯಕ್ಷ ಶಿವನಾಂದ ತಗಡೂರು ಅಭಿಪ್ರಾಯಪಟ್ಟಿದ್ದಾರೆ.

ಅವರು ಇಂದು ನಗರದ ಛೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಮತ್ತು ತಾಲೂಕು ಘಟಕದ ಪದಾಧಿಕಾರಿಗಳ, ಕಾರ್ಯಕಾರಿ ಸಮಿತಿ ಸದಸ್ಯರ ಪದಗ್ರಹಣ ಸಮಾರಂಭ ಉದ್ಘಾಟನೆ ಮಾಡಿ ಮಾತನಾಡುತ್ತಿದ್ದರು.ಇಂದಿನ ಡಿಜಿಟಲ್ ಯುಗದಲ್ಲಿ ಸುದ್ದಿ ವೇಗವಾಗಿ ಹರಡುವಂತಾಗಿರುವುದರಿಂದ, ಪತ್ರಕರ್ತರು ಇನ್ನಷ್ಟು ಜವಾಬ್ದಾರಿಯಿಂದ ವರದಿ ಮಾಡಬೇಕಾದ ಅಗತ್ಯವಿದೆ ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರು ಯಾವುದೇ ಒತ್ತಡಗಳಿಗೆ ಮಣಿಯದೇ, ಜನಪರ ಹಾಗೂ ನಿಷ್ಪಕ್ಷಪಾತ ಪತ್ರಿಕೋದ್ಯಮವನ್ನು ಮುಂದುವರಿಸಬೇಕು ಎಂದು ಕರೆ ನೀಡಿದ ಅವರು. "ಸಂಘಟನೆ ಬಲವಾಗಿದ್ದರೆ ಮಾತ್ರ ಪತ್ರಕರ್ತರ ಹಕ್ಕುಗಳು, ಭದ್ರತೆ ಮತ್ತು ಗೌರವವನ್ನು ಕಾಯ್ದುಕೊಳ್ಳಲು ಸಾಧ್ಯ. ನೂತನವಾಗಿ ಪದಗ್ರಹಣ ಮಾಡಿದ ಪದಾಧಿಕಾರಿಗಳು ಸಂಘಟನೆಯನ್ನು ಇನ್ನಷ್ಟು ಚುರುಕಾಗಿ ನಡೆಸಿ, ಜಿಲ್ಲೆಯ ಪತ್ರಕರ್ತರ ಸಮಸ್ಯೆಗಳಿಗೆ ಸ್ಪಂದಿಸಬೇಕು" ಎಂದು ಸಲಹೆ ನೀಡಿದರು.

ಪತ್ರಕರ್ತರ ಕಲ್ಯಾಣ, ವಿಮೆ, ತರಬೇತಿ ಹಾಗೂ ವೃತ್ತಿಪರ ರಕ್ಷಣೆಗೆ ಸಂಘ ನಿರಂತರವಾಗಿ ಶ್ರಮಿಸಲಿದೆ ಎಂದು ಭರವಸೆ ನೀಡಿದರು.ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಮಾತನಾಡಿ, ನೀವೆಲ್ಲ ನಿಷ್ಪಕ್ಷಪಾತವಾಗಿ ವರದಿ ಮಾಡಿ, ಧೈರ್ಯವಾಗಿ ಮಾತನಾಡುವ ವ್ಯಕ್ತಿತ್ವ ನಿಮ್ಮದಾಗಲಿ, ವೃತ್ತಿಯನ್ನು ಸಮಾಜದ ಒಳಿತಿಗಾಗಿ ಉಪಯೋಗಿಸಿಕೊಳ್ಳಿ ಎಂದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ.ಮಾತನಾಡಿ, ಪ್ರಾಮಾಣಿಕತೆಯಿಂದ ಜನರಿಗೆ ಉತ್ತಮ ಕೆಲಸ ಮಾಡುವ ಉದ್ದೇಶವಿಟ್ಟುಕೊಂಡು ಕಾರ್ಯ ನಿರ್ವಹಿಸಲು ಮನವಿ ಮಾಡಿದರು.

ಎಸ್ಪಿ ಡಾ.ಶೋಭಾರಾಣಿ ಅವರು ಮಾತನಾಡಿ, ಸಾಮಾಜಿಕ ಮಾಧ್ಯಮಗಳ ಮೂಲಕ ನಿಜವಾದ ಸುದ್ದಿ ಯಾವುದು ಸುಳ್ಳು ಯಾವುದು ಎಂಬಂತಾಗಿದೆ. ಅದಕ್ಕಾಗಿ ಸತ್ಯಾಸತ್ಯತೆಯ ಸುದ್ದಿಕೊಡುವ ಮಾಧ್ಯಮಗಳು ಮುಖ್ಯ ಎಂದರು.

ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್ ಮಾತನಾಡಿ, ಖಡ್ಗಕ್ಕಿಂತ ಹರಿತವಾದ ಪೆನ್ನನ್ನು ಹೊಂದಿರುವ ಪತ್ರಕರ್ತರು ಸಮಾಜದ ಕೆಟ್ಟ ಸಂಸ್ಕೃತಿಯನ್ನು ಹೋಗಲಾಡಿಸುವ ಕೆಲಸ ಮಾಡಬೇಕು ಎಂದರು.

ಮೇಯರ್ ಪಿ. ಗಾದೆಪ್ಪ ಮಾತನಾಡಿ, ನಗರದ ದುರ್ಗಮ್ಮ ದೇವಸ್ಥಾನದ ಅಭಿವೃದ್ಧಿ ವಿಷಯದಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದು ಎಂದ ಅವರು, ಪಾಲಿಕೆಯಲ್ಲಿ ಪತ್ರಕರ್ತರ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪಿಸಿ ಅವರ ಸಂಕಷ್ಟಗಳಿಗೆ ಸ್ಪಂದಿಸುವ ಕೆಲಸ ಈ ಬಾರಿಯ ಬಜೆಟ್ ನಲ್ಲಿ ಮಾಡಲಿದೆಂದು ಭರವಸೆ ನೀಡಿದರು.

ಅಧ್ಯಕ್ಷತೆವಹಿಸಿದ್ದ ಸಂಘದ ಅಧ್ಯಕ್ಷ ಎನ್.ವೀರಭದ್ರಗೌಡ, ಮಾತನಾಡಿ ಪತ್ರಿಕಾ ಭವನದ ಅಭಿವೃದ್ಧಿ, ಪತ್ರಕರ್ತರ ಕ್ಷೇಮಾಭಿವೃದ್ಧಿ ನಿಧಿ ಸ್ಥಾಪನೆ ಮೊದಲಾದ ಕಾರ್ಯಗಳ ಮೂಲಕ ಸಂಘವು ಕ್ರಿಯಾತ್ಮಕವಾಗಿ ನಡೆಯಲಿದೆ. ಇಂದು ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ ತಲಾ ಎರೆಡು ಲಕ್ಷ ರೂಗಳನ್ನು ನೀಡಿದ ಶಾಸಕರೂ, ಮಾಜಿ ಸಚಿವರಾದ ಬಿ.ನಾಗೇಂದ್ರ, ನಗರ ಶಾಸಕ ನಾರಾ ಭರತ್ ರೆಡ್ಡಿ ಅವರಿಗೆ ಧನ್ಯವಾದ ಸಲ್ಲಿಸಿದರು.

ಈ ವೇಳೆ ಈ ಬಾರಿಯ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಾಧ್ಯಮ ಕ್ಷೇತ್ರದ ಕೆ.ಎನ್. ಗಂಗಾಧರ, ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ ಎಸ್.ನಾಗರಾಜ್, ಸಿದ್ದು ಪೂಜಾರ್ ಅವರನ್ನು ಸನ್ಮಾನಿಸಿ ಗೌರವಿಸಲಾಯ್ತು. ಸಮಾರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಮತ್ತು ರಾಜ್ಯ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು ಪ್ರತಿಜ್ಞಾ ವಿಧಿ ಭೋದಿಸಿದರು. ಸಮಾರಂಭದಲ್ಲಿ ಶಾಸಕರಾದ ಬಿ.ನಾಗೇಂದ್ರ, ನಾರಾ ಭರತ್ ರೆಡ್ಡಿ, ಡಿಸಿಸಿ ಅಧ್ಯಕ್ಷ ಅಲ್ಲಂ ಪ್ರಶಾಂತ್, ಪಾಲಿಕೆಯ ಪ್ರತಿಪಕ್ಷದ ನಾಯಕ ಶ್ರೀನಿವಾಶ್ ಮೋತ್ಕರ್, ಜಿಪಂ ಸಿಈಓ ಮಹಮ್ಮದ್ ಹಾರೀಶ್ ಸುಮೇರ, ಸಂಘದ ರಾಜ್ಯ ಸಮಿತಿ ಸದಸ್ಯ, ಹೆಚ್.ಬಸವರಾಜ್, ಕೆಪಿಸಿಸಿ ವಕ್ತಾರ ವೆಂಕಟೇಶ್ ಹೆಗಡೆ ಮೊದಲಾದವರು ಇದ್ದರು.

ಸಂಘದ ಪ್ರಧಾನ ಕಾರ್ಯದರ್ಶಿ ನರಸಿಂಹಮೂರ್ತಿ ಕುಲಕರ್ಣಿ ಸ್ವಾಗತ, ಕಾರ್ಯಕಾರಿ ಸದಸ್ಯ ಕೆ.ಎಂ.ಮಂಜುನಾಥ ಕಾರ್ಯಕ್ರಮ ನಿರೂಪಣೆ, ವೆಂಕಟೇಶ್ ದೇಸಾಯಿ ವಂದನಾರ್ಪಣೆ, ಶೃತಿ ಹಂದ್ಯಾಳ್ ಪ್ರಾರ್ಥನೆ ಸಲ್ಲಿಸಿದರು.

# ಕಾರ್ಯನಿರತ ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ ತಲಾ 2 ಲಕ್ಷ ರೂ ನೀಡಿದ ನಾಗೇಂದ್ರ, ಭರತ್ ರೆಡ್ಡಿ





**ಬಳ್ಳಾರಿ, ಡಿ.29–** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಳ್ಳಾರಿ ಜಿಲ್ಲಾ ಘಟಕಕ್ಕೆ ಮಾಜಿ ಸಚಿವರು, ಗ್ರಾಮೀಣ ಶಾಸಕ ಬಿ.ನಾಗೇಂದ್ರ ಮತ್ತು ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ತಲಾ ಎರೆಡು ಲಕ್ಷ ರೂಗಳ ದೇಣಿಗೆ ನೀಡಿದ್ದಾರೆ.

ಅವರು ಇಂದು ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ನಡೆದ ಪತ್ರಕರ್ತರ ಪದಗ್ರಹಣ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಬಿ.ನಾಗೇಂದ್ರ ಅವರು ಸಮಾರಂಭದಲ್ಲಿಯೇ ಕ್ಷೇಮಾಭಿವೃದ್ಧಿ ನಿಧಿಗೆ ಸ್ಥಳದಲ್ಲಿಯೇ ಹಣ ನೀಡಿ. ಈಬಾರಿ ಪತ್ರಕರ್ತರು ಚುನಾವಣೆ ಮೂಲಕ ಆಯ್ಕೆಯಾಗುವುದರಿಂದ ರಾಜಕಾರಣಿಗಳ ಸಂಕಷ್ಟ ಹೇಗಿರುತ್ತದೆ ಎಂಬುದು ನಿಮಗೂ ಅರ್ಥವಾದಂತಿದೆ. ಬಳ್ಳಾರಿ ಪತ್ರಕರ್ತರ ಪ್ರಶ್ನೆಗಳು ಸಮಾಜಮುಖಿ ಇರುತ್ತವೆ. ಯಾವುದೇ ಮುಲಾಜಿಲ್ಲದೆ ಪ್ರಶ್ನಿಸುವ ಸ್ವಭಾವ ಸ್ವಾಗತಾರ್ಹ ಎಂದರು.

ಬಳ್ಳಾರಿ ಪತ್ರಕರ್ತರ ಬಗ್ಗೆ ಭಯ, ಭಕ್ತಿ, ಗೌರವ ಇದೆ. ನಿಮ್ಮ ಸಂಘದ ಬೆನ್ನೆಲುಬಾಗಿ ಇರುತ್ತೇವೆ ಜಿಲ್ಲೆಯ ಎಲ್ಲಾ ಜನ ಪ್ರತಿನಿಧಿಗಳು ಸರ್ಕಾರದ ಸೌಲಭ್ಯಗಳನ್ನು ನಿಮಗೆ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಿದೆ.

ಪತ್ರಿಕಾ ಭವನದ ಮೇಲೆ ಸಹೋದರ ಶಾಸಕ ಭರತ್ ಮತ್ತು ನಾನು ಶಾಸಕರ ನಿಧಿಯಿಂದ ಕಟ್ಟಡ ನಿರ್ಮಾಣಕ್ಕೆ 20 ಲಕ್ಷ ರೂ ಅನುದಾನ ನೀಡುವುದಾಗಿ ಘೋಷಣೆ ಮಾಡಿದರು. ಗೆದ್ದವರೂ ಸೋತವರೂ ಎಲ್ಲರೂ ಒಂದಾಗಿ ಸಂಘದ ಅಭಿವೃದ್ಧಿಗೆ ಶ್ರಮಿಸಲು ಕೋರಿದರು.

ರಾಜಕೀಯ ಮತ್ತು ಪತ್ರಿಕೋದ್ಯಮ ಜೋಡೆತ್ತುಗಳಿದ್ದಾಗೆ. ಜಿಲ್ಲೆಯ ಎಲ್ಲಾ ಜನ ಪ್ರತಿನಿಧಿಗಳು ಜಿಲ್ಲೆಯ ಅಭಿವೃದ್ಧಿಗೆ ಸಂಕಲ್ಪ ಮಾಡಿದೆ ನಿಮ್ಮ ಸಹಕಾರವೂ ಅಗತ್ಯ ಎಂದರು.ಸುಳ್ಳು ಸುದ್ದಿಗಳಿಂದ ಮನಸ್ಸಿಗೆನೋವಾಗುತ್ತದೆ ಆ ಕೆಲಸ ಮಾಡಬೇಡಿ ಎಂದು ಮನವಿ ಮಾಡಿದರು.

ನಗರ ಶಾಸಕ ಭರತ್ ರೆಡ್ಡಿ ಅವರು ಕ್ಷೇಮಾಭಿವೃದ್ಧಿಗೆ ಎರೆಡು ಲಕ್ಷ ರೂ ನೀಡುವುದಾಗಿ ಘೋಷಣೆ ಮಾಡಿ, ನೀವಿಲ್ಲದಿರೆ ನಾವಿಲ್ಲ, ನಾವಿಲ್ಲ ದಿದ್ದಿದರೆ ನೀವಿಲ್ಲ ಎಂಬಂತೆ ಕೆಲಸ ಮಾಡಿದಾಗ ಸಮಾಜಕ್ಕೆ ಒಳಿತಾಗುತ್ತದೆ. ಅಭಿವೃದ್ಧಿ ಕೆಲಸಗಳಿಗೆ ಅನೇಕ ಅಡ್ಡಿ ಆತಂಕಗಳು ಇರುತ್ತವೆ ಅವನ್ನು ಮೀರಿ ಕೆಲಸ ಮಾಡಲಾಗುತ್ತಿದೆಂದರು.

ಹೊಸ ವರ್ಷದಲ್ಲಿ ನಾಗೇಂದ್ರ ಅಣ್ಣ ಅವರು ಸಚಿವರಾಗುತ್ತಾರೆ, ಆನಂತರ ಇದು ಸುವರ್ಣ ಬಳ್ಳಾರಿಯಾಗುವುದರಲ್ಲಿ ಅನುಮಾನ ಇಲ್ಲ. ಪತ್ರಿಕಾ ಭವನದ ಅಭಿವೃದ್ಧಿಗೆ ಅಗತ್ಯವಾದಷ್ಟು ಅನುದಾನ ನೀಡಲಿದೆಂದು ಹೇಳಿದರು.

ವಾರ್ತಾ ಇಲಾಖೆಯ ಸಹಾಯಕ ಅಧಿಕಾರಿ ವಿ.ಸಿ. ಗುರುರಾಜ್ ಮೊದಲಾದವರು ಇದ್ದರು.

# ಜೈಲಿನಲ್ಲಿ ಆರ್.ಡಿ.ಪಾಟೀಲ ಮತ್ತೆ ತಗಾದೆ

**ಕಲಬುರಗಿ,ಡಿ.29–**ಪಿಎಸ್‌ಐ ನೇಮಕಾತಿ ಹಗರಣದ ಪ್ರಮುಖ ಆರೋಪಿ ಆರ್.ಡಿ.ಪಾಟೀಲ ಇಲ್ಲಿನ ಕೇಂದ್ರ ಕಾರಾಗೃಹದ ಸಿಬ್ಬಂದಿ ಜೊತೆಗೆ ಮತ್ತೆ ಕಿರಿಕ್ ಮಾಡಿಕೊಂಡಿದ್ದು, ಈ ಸಂಬಂಧ ಕೇಂದ್ರ ಕಾರಾಗೃಹದ ಮುಖ್ಯ ಧೀಕ್ಷಕಿ ಅನಿತಾ ಆರ್.ಅವರು ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಹಿರಿಯ ಅಧಿಕಾರಿಗಳ ಸೂಚನೆಯಂತೆ ಜೈಲು ಸಿಬ್ಬಂದಿ ಶನಿವಾರ ಬ್ಯಾರಕ್ ತಪಾಸಣೆ ನಡೆಸುತ್ತಿದ್ದರು. ಈ ವೇಳೆ ಜೈಲು ಸಿಬ್ಬಂದಿ ಜೊತೆಗೆ ಆರ್.ಡಿ.ಪಾಟೀಲ ತಗಾದೆ ತೆಗೆದ ಆರ್.ಡಿ.ಪಾಟೀಲ, "ನನ್ನ ಬ್ಯಾರಕ್ ತಪಾಸಣೆಗೆ ಅನುಮತಿ ಇದೆಯಾ ?, ಅನುಮತಿ ಇಲ್ಲದೇ ಬ್ಯಾರಕ್ ತಪಾಸಣೆಗೆ ಬಿಡಲ್ಲ ಎಂದು ವಾದಿಸಿದ್ದ. ಅಷ್ಟೇ ಅಲ್ಲ, "ನಿಮ್ಮ ಮೊಬೈಲ್ ಫೋನ್ ಕೊಡ್ರಿ, ನಾನು ಪ್ರೊಸಿಜರ್ ತೋರಿಸ್ತೀನಿ" ಎಂದು ಜೈಲು ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸಿದ್ದ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಆರ್.ಡಿ.ಪಾಟೀಲ ವಿರುದ್ಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಯುವ ಮಾರ್ಗ

www.yuvamarga.com Yuva Marga yuva_marga_

# ಜೆಸ್ಕಾಂನಿಂದ ಡಿಸೆಂಬರ್ 30ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಡಿ.29–** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ ವ್ಯಾಪ್ತಿಗೆ ಬರುವ 110/11 ಕೆವಿ ಚಿಕ್ಕಸೂಗೂರು, ಶಕ್ತಿನಗರ, ಯಾಪಲದಿನ್ನಿ, ಕೆಐಎಡಿಬಿ ಯರಮರಸ್ ಮತ್ತು 33/11ಕೆವಿ ಮಾಮಡಿದೊಡ್ಡಿ ವಿದ್ಯುತ್ ಉಪ ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 30ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 01ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್‌ಸೇಟಿನಿಂದ ಮಹಿಳಾ ಟೈಲರಿಂಗ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ಡಿ.29–**ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಮಹಿಳಾ ಟೈಲರಿಂಗ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 2026ರ ಜನವರಿ 2ರಿಂದ ಪ್ರಾರಂಭವಾಗಿ 31ದಿನಗಳ ಕಾಲ ನಡೆಯಲಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8 ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಸೆಂಬರ್ 31ರಂದು ವಿಶ್ವ ವಿಕಲಚೇತನರ ದಿನಾಚರಣೆ

**ರಾಯಚೂರು,ಡಿ.29–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸಂಘ ಹಾಗೂ ವಿವಿಧ ಒಕ್ಕೂಟಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳು ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025ರ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಡಿಸೆಂಬರ್ 31ರ ಬೆಳಿಗ್ಗೆ 10.30 ಗಂಟೆಗೆ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರ ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ವಿಕಲಚೇತನರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪ್ರೆಂಟಿಸ್ ತರಬೇತಿಯ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆ ಆಹ್ವಾನ

**ರಾಯಚೂರು,ಡಿ.29–** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ರಾಯಚೂರು ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗೆ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ಈ ಆಯ್ಕೆಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು 2026ರ ಜನವರಿ 3 ಕೊನೆಯ ದಿನವಾಗಿದೆ. ಜನವರಿ 3 ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಜನವರಿ 3ರೊಳಗೆ ಆಕ್ಷೇಪಣೆಗಳು ಬಾರದಿದ್ದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನೇ ಅಂತಿಮ ಆಯ್ಕೆಪಟ್ಟಿಗೆ ಪರಿಗಣಿಸಲಾಗುವುದು ಎಂದು ರಾಯಚೂರು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,
9743496111

# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲೆಗೆ ವಿಭಾಗ ಮಟ್ಟದಲ್ಲಿ ಪ್ರಥಮ ಸ್ಥಾನ

ಯುವಮಾರ್ಗ ಸುದ್ದಿ



**ರಾಯಚೂರು,ಡಿ.29–**ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕದ 2024-25ನೇ ಸಾಲಿನ ಜಿಲ್ಲೆಯ ಸಮಗ್ರ ಚಟುವಟಿಕೆಗಳ ಅಭಿವೃದ್ಧಿಯನ್ನು ಪರಿಗಣಿಸಿ ರಾಯಚೂರು ಜಿಲ್ಲೆಗೆ ಕಲಬುರಗಿ ವಿಭಾಗೀಯ ಮಟ್ಟದಲ್ಲಿ ಪ್ರಥಮ ಸ್ಥಾನವನ್ನು ಗಳಿಸಿರುವುದಕ್ಕೆ ಪ್ರೋ.ಕೆ ಶಿವಶಂಕರ್ ಪರ್ಯಾಯ ಪಾರಿತೋಷಕ ಪ್ರಶಸ್ತಿಯನ್ನು ಮಾನ್ಯ ಶ್ರೀ ಪಿ.ಜಿ.ಆರ್ ಸಿಂಧ್ಯ ರಾಜ್ಯ ಮುಖ್ಯ ಆಯುಕ್ತರು ಇವರು ನೀಡಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ಶ್ರೀ ಬಸವರಾಜ ಬೋರೆಡ್ಡಿ ಜಿಲ್ಲಾ ಮುಖ್ಯ ಆಯುಕ್ತರು, ಶ್ರೀ ಬಸವರಾಜ ಗದಗಿನ ಜಿಲ್ಲಾ ಆಯುಕ್ತರು (ಸ್ಕೌ), ಶ್ರೀಮತಿ ರಾಜಶ್ರೀ ಸಜ್ಜನ್ ಜಂಟಿ ಕಾರ್ಯದರ್ಶಿಗಳು (ಗೈ), ಶ್ರೀಮತಿ ರಜನಿ.ಡಿ ರಾಜ್ಯ ಪರಿಷತ್ ಸದಸ್ಯರು (ಗೈ), ಶ್ರೀ ಬೀರಪ್ಪ ಶಂಭೋಜಿ ಸಹಾಯಕ ಜಿಲ್ಲಾ ಆಯುಕ್ತರು (ಸ್ಕೌ), ಶ್ರೀ ಮಲ್ಲಪ್ಪ ಕುಂಬಾರ ಸಹಾಯಕ ಜಿಲ್ಲಾ ಆಯುಕ್ತರು ಇವರು ಪ್ರಶಸ್ತಿಯನ್ನು ಸ್ವೀಕರಿಸಿದರು.

# 140ನೇ ರಾಷ್ಟ್ರೀಯ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ

ಯುವಮಾರ್ಗ ಸುದ್ದಿ



**ಲಿಂಗಸಗೂರು : ಡಿ 29–**ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ 140ನೇ ಸಂಸ್ಥಾಪನಾ ದಿನಾಚರಣೆಯನ್ನು ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ್ ರವರು ನೇತೃತ್ವ ವಹಿಸಿದರು . ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟು, ರಾಷ್ಟ್ರದ ಏಕತೆ, ಅಖಂಡತೆ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ಕಾಂಗ್ರೆಸ್ ಪಕ್ಷದ ಎಲ್ಲಾ ಹಿರಿಯ ನಾಯಕರು ಮತ್ತು ಮಹಾನ್ ತ್ಯಾಗಿಗಳನ್ನು ಈ ಸಂದರ್ಭದಲ್ಲಿ ಸ್ಮರಿಸಿ ಕಾಂಗ್ರೆಸ್ ಪಕ್ಷವು ದೇಶದ ಪ್ರಜಾಪ್ರಭುತ್ವದ ರಕ್ಷಣೆಗೆ ಹಾಗೂ ಸಾಮಾಜಿಕ ನ್ಯಾಯದ ಅನುಷ್ಠಾನಕ್ಕೆ ನೀಡಿರುವ ಕೊಡುಗೆಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಪಾಟೀಲ ಕರಡಕಲ್, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅಧ್ಯಕ್ಷ ಪಾಮಯ್ಯ ಮುರಾರಿ, ಗುಂಡಪ್ಪ ನಾಯಕ್, ಸೋಮಶೇಖರ್ ಐದನಾಳ, ಪ್ರಮೋದ ಕುಲ್ಕರ್ಣಿ, ಶರಣಬಸವ ವಾರದ್, ಶಿವನಗೌಡ ವಂದಲ್ಲಿ, ಅನಿಷ್ ಪಾಷಾ, ಅಮರೇಶ ಮೆದಿನಪುರ, ವೆಂಕಟೇಶ ಕಳ್ಳಿಲಿಂಗಸಗೂರು, ನಾಗರಾಜ್ ಕುಪ್ಪಣ್ಣಿ, ಲಾಲಪ್ಪ ರಾಠೋಡ, ಜಗದೀಶ ಪಾಟೀಲ್, ಪ್ರಕಾಶ್ ಕುರಿ, ಶಿವಾಜಿ ಕಟ್ಟಿಮನಿ, ಶರಣಪ್ಪ ಹುನುಕುಂಟಿ, ಮೋಹನ್ ಗೋಸ್ಲೆ ಕರಡಕಲ್, ಮೌನೇಶ ತೊಪ್ಪಲ್ ದೊಡ್ಡಿ ಸೇರಿದಂತೆ ಪಕ್ಷದ ಹಿರಿಯ ಮುಖಂಡರು, ಪದಾಧಿಕಾರಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

# ಪಗಡದಿನ್ನಿ – ರಕ್ತದಾನ ಶಿಬಿರ ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ಸಿಂಧನೂರು,ಡಿ.29–** ಪಗಡದಿನ್ನಿ ಗ್ರಾಮ ಪಂಚಾಯತ್ ಅರಿವು ಕೇಂದ್ರ, ಹಾಗೂ ದೇವರಗುಡಿ ಗ್ರಾಮದಲ್ಲಿ ಅಜೀಮ್ ಪ್ರೇಮಜೀ ಫೌಂಡೇಶನ್ ರಾಯಚೂರು ಹಾಗೂ ಶ್ರೀ ಶಕ್ತಿ ರಕ್ತ ಕೇಂದ್ರ ಸಿಂಧನೂರು ರವರ ಸಹಯೋಗದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

ತಾಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಪಗಡದಿನ್ನಿ ಆವರಣದಲ್ಲಿ ರವಿವಾರ ಈ ರಕ್ತದಾನ ಶಿಬಿರ ಕಾರ್ಯಕ್ರಮವನ್ನು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎನ್ ಬಸವರಾಜ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ದೇಶಿಸಿ ಶಾಲಾ ಮುಖ್ಯ ಗುರುಗಳಾದ ಪರಸಪ್ಪ ಮಾತನಾಡಿ ದಾನಗಳಲ್ಲಿ ರಕ್ತದಾನ ಮಹಾದಾನ ಜನರ ಜೀವ ರಕ್ಷಣೆಗೆ ರಕ್ತ ಅತ್ಯವಶ್ಯಕವಾಗಿದ್ದು, ರಕ್ತದ ಅವಶ್ಯಕತೆ ಇರುವ ವ್ಯಕ್ತಿಗಳಿಗೆ ರಕ್ತದಾನ ಮಾಡುವುದರ ಮೂಲಕ ಎಲ್ಲರೂ ಜನರ ಅಮೂಲ್ಯವಾದ ಜೀವ ರಕ್ಷಣೆಗೆ ಮುಂದಾಗಬೇಕು ಎಂದರು.

ನೊಬೆಲ್ ಕಾಲೇಜ್ ವಿದ್ಯಾರ್ಥಿ ಬಸನಗೌಡ 22 ಸಾರಿ ರಕ್ತದಾನ ಮಾಡಿ ಜೀವನ ಉಳಿಸುವುದರ ಜೊತೆಗೆ ಮಾನವೀಯತೆ ಮೆರೆದಿದ್ದಾನೆ. ಒಟ್ಟು 14 ಜನ ರಕ್ತದಾನ ಮಾಡಿದರು.

ಇದೇ ಸಂದರ್ಭದಲ್ಲಿ ಊರಿನ ಮುಖಂಡರಾದ ಶರಣೇಗೌಡ,ಬಸನಸಗೌಡ ಸಿಂಧನೂರು,ನಿರುಪಾದಿ, ಗ್ರಾಮ ಪಂ. ಸದಸ್ಯರಾದ ,ಪಂಪಾಪತಿ ,ದುಗ್ಗಪ್ಪ, ಎಸ್ ಡಿ ಎಂ ಸಿ ಅಧ್ಯಕ್ಷ ಶರಣಬಸವ,ಫೌಂಡೇಶನ್ ಸಂಚಾಲಕ ಅಯ್ಯನಗೌಡ, ನಿಕಟ ಪೂರ್ವ ಬಿಆರ್‌ಪಿ ರವಿ ಪವಾರ್, ಹಾಗೂ ಮೈನುದ್ದೀನ್, ಷಣ್ಮುಖ ಗೌಡ,

ಗ್ರಂಥಾಲಯ ಮೇಲ್ವಿಚಾರಕರು ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗ ,ಶಾಲಾ ಶಿಕ್ಷಕರು,ಕಾಲೇಜು ಉಪನ್ಯಾಸಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು

# ಯರಗೇರಾದ ಶ್ರೀ ದರ್ಗಾ ಹಜರತ್ ಬಡೇಸಾಹೇಬ್ ಉರುಸಿನಲ್ಲಿ ಶಾಸಕರು ಭಾಗಿ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.29–**ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ಯರಗೇರಾ ಗ್ರಾಮದಲ್ಲಿ ಸರ್ವಧರ್ಮ ಭಾವೈಕ್ಯತೆಯ ಸಂಕೇತವಾದ ಶ್ರೀ ದರ್ಗಾ ಹಜರತ್ ಬಡೇಸಾಹೇಬ್ ಉರುಸಿನಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಬಸನಗೌಡ ದದ್ದಲ್ ಅವರು ಭಾಗವಹಿಸಿ ಆಶೀರ್ವಾದ ಪಡೆದರು.

ಈ ಸಂಧರ್ಭದಲ್ಲಿ ಊರಿನ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಮುಖಂಡರು, ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮಸ್ಥರು ಹಾಗೂ ಭಕ್ತಾಧಿಗಳು ಉಪಸ್ಥಿತರಿದ್ದರು.

## ರಿಮ್ಸ್ ಆಸ್ಪತ್ರೆಯಲ್ಲಿ ಖಾಸಗಿ ಆಂಬುಲೆನ್ಸ್ ಗಳ ಹಾವಳಿ; ದಂಧೆಗೆ ಕಡಿವಾಣ ಹಾಕಲು ಭೀಮ್ ಆರ್ಮಿ ಆಗ್ರಹ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.29–** ಜಿಲ್ಲೆಯ ವೈದ್ಯಕೀಯ ವಿಜ್ಞಾನ ಸಂಸ್ಥೆ (ರಿಮ್ಸ್) ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಖಾಸಗಿ ಆಂಬುಲೆನ್ಸ್‌ಗಳ ದರ್ಬಾರ್ ರಾಜಾರೋಷವಾಗಿ ನಡೆಯುತ್ತಿದ್ದು, ಇದಕ್ಕೆ ತಕ್ಷಣ ಕಡಿವಾಣ ಹಾಕಬೇಕು. ಈ ದಂಧೆಯಲ್ಲಿ ಶಾಮೀಲಾಗಿರುವ ರಿಮ್ಸ್ ಸಿಬ್ಬಂದಿಗಳ ವಿರುದ್ಧ ಸಮಗ್ರ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕೆಂದು ಜಿಲ್ಲಾಡಳಿತಕ್ಕೆ ಹಾಗೂ ಜಿಲ್ಲಾ ವೈದ್ಯಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.ರಾಯಚೂರು ಜಿಲ್ಲೆಯ ಪ್ರಮುಖ ಸರ್ಕಾರಿ ಆಸ್ಪತ್ರೆಯಾಗಿರುವ ರಿಮ್ಸ್‌ಗೆ ಪ್ರತಿನಿತ್ಯ ರಾಯಚೂರು ಜಿಲ್ಲೆಯ ಐದಾರು ತಾಲೂಕುಗಳಿಂದ, ಗ್ರಾಮಾಂತರ ಪ್ರದೇಶಗಳಿಂದ ಮಾತ್ರವಲ್ಲದೆ ಯಾದಗಿರಿ ಜಿಲ್ಲೆ ಹಾಗೂ ಗಡಿ ಪ್ರದೇಶಗಳಾದ ಆಂಧ್ರಪ್ರದೇಶ ಮತ್ತು ತೆಲಂಗಾಣದಿಂದಲೂ ನೂರಾರು ರೋಗಿಗಳು ಚಿಕಿತ್ಸೆಗೆ ಆಗಮಿಸುತ್ತಿದ್ದಾರೆ. ಈ ಪರಿಸ್ಥಿತಿಯನ್ನು ಬಂಡವಾಳ ಮಾಡಿಕೊಂಡ ಖಾಸಗಿ ಆಂಬುಲೆನ್ಸ್ ಮಾಲಿಕರು ರೋಗಿಗಳಿಂದ ದುಪ್ಪಟ್ಟು ಹಣ ವಸೂಲಿ ಮಾಡುತ್ತಾ ದಂಧೆಗೆ ಇಳಿದಿದ್ದಾರೆ ಎಂದು ಆರೋಪಿಸಿದರು.

ನಿಯಮಾನುಸಾರ ಯಾವುದೇ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಖಾಸಗಿ ಆಂಬುಲೆನ್ಸ್‌ಗಳಿಗೆ ನಿಲುಗಡೆಗೆ ಅವಕಾಶವಿಲ್ಲ. ಅವುಗಳು ಆಸ್ಪತ್ರೆ ಹೊರಭಾಗದಲ್ಲಿ ನಿಗದಿತ ಸ್ಥಳದಲ್ಲಿ ಇರಬೇಕು ಮತ್ತು ಅಗತ್ಯವಿದ್ದಾಗ ಮಾತ್ರ ಕರೆ ಬಂದ ಮೇಲೆ ಸೇವೆ ಸಲ್ಲಿಸಬೇಕು. ಆದರೆ ಈ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ರಾಯಚೂರು ರಿಮ್ಸ್ ಆಸ್ಪತ್ರೆಯ ಆವರಣದಲ್ಲಿಯೇ ಖಾಸಗಿ ಆಂಬುಲೆನ್ಸ್‌ಗಳು ಸದಾ ಬೀಡು ಬಿಟ್ಟಿರುವುದು ಗಂಭೀರ ಅಕ್ರಮಕ್ಕೆ ಸಾಕ್ಷಿಯಾಗಿದೆ ಎಂದರು.ಸದ್ಯ ರಿಮ್ಸ್ ಆಸ್ಪತ್ರೆಯಲ್ಲಿ 6 ಸರ್ಕಾರಿ ಆಂಬುಲೆನ್ಸ್‌ಗಳಿದ್ದರೂ, 9 ಖಾಸಗಿ ಆಂಬುಲೆನ್ಸ್‌ಗಳು ನಿರಂತರವಾಗಿ ಆಸ್ಪತ್ರೆಯ ಆವರಣದಲ್ಲೇ ಕಾಣಿಸಿಕೊಳ್ಳುತ್ತಿವೆ. ಇದಕ್ಕಿಂತಲೂ ಆತಂಕಕಾರಿ ವಿಷಯವೆಂದರೆ, ರಿಮ್ಸ್ ಆಸ್ಪತ್ರೆಯ ಕೆಲ ಸಿಬ್ಬಂದಿಗಳು ಈ ದಂಧೆಯಲ್ಲಿ ಭಾಗಿಯಾಗಿದ್ದು, ಸರ್ಕಾರಿ ಆಂಬುಲೆನ್ಸ್‌ಗಳಿಗೆ ವಿವಿಧ ಸಮಸ್ಯೆಗಳಿವೆ ಎಂದು ರೋಗಿಗಳ ಸಂಬಂಧಿಕರಿಗೆ ಹೇಳಿ ಖಾಸಗಿ ಆಂಬುಲೆನ್ಸ್‌ಗಳನ್ನು ಸಂಪರ್ಕಿಸುವಂತೆ ಸೂಚಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರುತ್ತಿವೆ. ಇಷ್ಟೆಲ್ಲಾ ನಡೆಯುತ್ತಿದ್ದರೂ ಆಡಳಿತಾಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿರುವುದು ಏಕೆ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಮೂಡಿದೆ. ಈ ಅಕ್ರಮ ದಂಧೆಯಲ್ಲಿ ಆಡಳಿತದವರಿಗೂ ಕಮಿಷನ್ ಹೋಗುತ್ತಿದೆಯೇ ಎಂಬ ಅನುಮಾನಗಳು ವ್ಯಕ್ತವಾಗುತ್ತಿದೆ ಎಂದು ಆಗ್ರಹಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಖಾಸಗಿ ಆಂಬುಲೆನ್ಸ್ ದಂಧೆಗೆ ಕಡಿವಾಣ ಹಾಕಬೇಕು. ಜೊತೆಗೆ ಶಾಮಿಲಾದ ಸಿಬ್ಬಂದಿಗಳ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ವೇಳೆ ಜಿಲ್ಲಾಧ್ಯಕ್ಷ ಸಿ ದೀಪಕ್ ಭಂಡಾರಿ, ವಿಶ್ವನಾಥ ಬಲ್ಲಿದೇವ್, ಖಲೀಲ್ ಹೈಮದ, ಅಬ್ದುಲ್ ಖೈಯುಮ ಇನ್ನಿತರರು ಹಾಜರಿದ್ದರು

# ಜಿಲ್ಲಾ ಯೋಜನಾ ಸಮಿತಿ ಚುನಾವಣೆ ಅಧಿಸೂಚನೆ ಪ್ರಕಟ

**ರಾಯಚೂರು,ಡಿ.29–** ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ರವರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ಜಿಲ್ಲಾ ಯೋಜನಾ ಸಮಿತಿ ಸದಸ್ಯರ ಚುನಾವಣೆ-2025) ನಿಯಮಗಳು 1996 ನಿಯಮ 08 ರಡಿ ರಾಯಚೂರು ಜಿಲ್ಲಾ ಯೋಜನಾ ಸಮಿತಿ ಸದಸ್ಯರ ಚುನಾವಣೆ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಪ್ರಸ್ತುತವಾಗಿ ನಗರ ಸ್ಥಳೀಯ ಸಂಸ್ಥೆಗಳಿಂದ 06 ಸದಸ್ಯರನ್ನು (ಪುರಸಭೆ, ಮಸ್ಕಿ ಮತ್ತು ಪಟ್ಟಣ ಪಂಚಾಯತ್, ಕವಿತಾಳ, ತುರವಿಹಾಳ, ಬಳಗಾನೂರು ಮತ್ತು ಸಿರವಾರ ಮತಕ್ಷೇತ್ರ ಒಳಗೊಂಡಂತೆ) ಆಯ್ಕೆ ಮಾಡಬೇಕಾಗಿರುತ್ತದೆ. ಈ ಕುರಿತು ನಾಮಪತ್ರ ಸಲ್ಲಿಸುವ ದಿನಾಂಕ 30.12.2025 ರಿಂದ 12.01.2026 ರವರೆಗೆ ನಾಮಪತ್ರ ಸಲ್ಲಿಸುವುದು, ನಾಮಪತ್ರ ಪರಿಶೀಲನೆ ದಿನಾಂಕ 13.01.2026 ಹಾಗೂ ನಾಮಪತ್ರ ಹಿಂತೆದುಕೊಳ್ಳುವ ಕೊನೆಯ ದಿನಾಂಕ 16.01.2026 ಚುನಾವಣೆ ದಿನಾಂಕ 22.01.2026 ರಂದು ಜರುಗಿಸಲಾಗುವುದು ಎಂದು ರಾಯಚೂರು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ.

# ಜೂಜಾಟ:8 ಜನರ ಬಂಧನ

ಕಲಬುರಗಿ,ಡಿ.29–ನಗರದ ಎಪಿಎಂಸಿ ಯಾರ್ಡನ್ ಹಿಂದಿನ ಗೇಟಿನ ಕಂಪೌಂಡ್ ಹತ್ತಿರ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಪಿಎಸ್‌ಐ ಕವಿತಾ ಚವ್ಹಾಣ್, ಸಿಬ್ಬಂದಿಗಳಾದ ಬಂದೇನವಾಜ್, ಶಿವಾನಂದ, ರಾಜಕುಮಾರ, ಸೈಯ್ಯದ್ ತೌಸೀಫ್ ಹುಸೇನ್ ಅವರು ದಾಳಿ ನಡೆಸಿ 8 ಜನರನ್ನು ಬಂಧಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H